ಸಂಪುಟ : 10 ಸಂಚಿಕೆ 3 ಪುಟ : 4+2 ಬೆಲೆ: 3.00 ಮಂಗಳವಾರ ಜನವರಿ 28 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 3 Pages : 4+2 Price : 3.00 Tuesday January 28 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಫೆ. 1 ಮತ್ತು 2 ರಂದು ನ್ಯೂಸ್‌ಫಸ್ಟ್‌ನಿಂದ ಮೆಗಾ ಕೋಚಿಂಗ್ ಎಕ್ಸ್‌ಪೋ ಆಯೋಜನೆ

# "ಕೋಚಿಂಗ್ ಗುರು"

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನ್ಯೂಸ್‌ಫಸ್ಟ್ ರಾಜ್ಯದ ಅತ್ಯಂತ ಜನಪ್ರಿಯ ಸುದ್ದಿವಾಹಿನಿಯಾಗಿದ್ದು, ಶಿಕ್ಷಣ ಕ್ಷೇತ್ರ, ಆರೋಗ್ಯ ಕ್ಷೇತ್ರ, ಸೈಬರ್ ಕ್ರೈಂ ಸೇರಿದಂತೆ ನಾಡಿನ ಜನರಿಗೆ ಅಗತ್ಯವಿರುವ ವಿಷಯಗಳ ಬಗ್ಗೆ ಬೆಳಕು ಚೆಲ್ಲುವ ಕೆಲಸ ಮಾಡಿಕೊಂಡು ಬಂದಿದೆ. ಜೊತೆಗೆ ಮೇಲೆ ತಿಳಿಸಿರುವ ಕ್ಷೇತ್ರಗಳಲ್ಲಿ ಜನಸಾಮಾನ್ಯರಿಗೆ ಅನುಕೂಲವಾಗುವಂತಹ ಅನೇಕ ಕಾರ್ಯಕ್ರಮಗಳನ್ನು ನ್ಯೂಸ್‌ಫಸ್ಟ್ ಕಳೆದ ನಾಲ್ಕು ವರ್ಷಗಳಿಂದಲೂ ನಿರಂತರವಾಗಿ ಮಾಡಿಕೊಂಡು ಬಂದಿದೆ.

ಸದ್ಯ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ದವಾಗುತ್ತಿರುವ ವಿದ್ಯಾರ್ಥಿಗಳಿಗೆಂದೇ ವಿನೂತನ ಎಕ್ಸ್‌ಪೋ ಒಂದನ್ನ ಆಯೋಜಿಸಿದೆ. ಸ್ಪರ್ಧಾತ್ಮಕ ಪರೀಕ್ಷೆಗೆ ಸಿದ್ದವಾಗುವ ವಿದ್ಯಾರ್ಥಿಗಳು ಏನೆಲ್ಲಾ ಕ್ರಮಗಳನ್ನು ಅನುಸರಿಸಬೇಕು, ಯಾವ ಕೋಚಿಂಗ್ ಸೆಂಟರ್ ಆಯ್ಕೆ ಮಾಡಿಕೊಳ್ಳಬೇಕು, ಅವರಿಂದ ಯಾವ ರೀತಿಯ ಮಾರ್ಗದರ್ಶನ ಪಡೆಯಬೇಕು ಎನ್ನುವ ಬಗ್ಗೆ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತಹ ಮೆಗಾ ಎಕ್ಸ್‌ಪೋ ಒಂದನ್ನ ಆಯೋಜಿಸಿದೆ. ಈ ಎಕ್ಸ್ ಪೋ ನಲ್ಲಿ ಓಇಇಖಿ, ಅಇಖಿ, ಎಇಇ, ಏಕಖಏ, ಗಕಖಏ, ಅಐಂಖಿ, ಅಂಖಿ, ಅಂ, ಕಖಖ, ಕಆಔ, ಸೇರಿದಂತೆ ವಿವಿಧ ಪರೀಕ್ಷೆಗಳಿಗೆ ಮಾರ್ಗದರ್ಶನ ಮಾಡುತ್ತಿರುವ ಎಲ್ಲಾ ಕೋಚಿಂಗ್ ಸೆಂಟರ್‌ಗಳು ಒಂದೇ ವೇದಿಕೆಯಲ್ಲಿ ಭಾಗವಹಿಸಲಿವೆ.

ಇದರ ಜೊತೆಗೆ ವಿದ್ಯಾರ್ಥಿಗಳು ಓದಿರುವುದನ್ನು ಸುಲಭವಾಗಿ ನೆನಪಿನಲ್ಲಿ ಇಟ್ಟುಕೊಳ್ಳುವುದು ಹೇಗೆ? ಪರೀಕ್ಷೆ ಸಮಯದಲ್ಲಿ ಎದುರಾಗುವ ಮಾನಸಿಕ ಒತ್ತಡದಿಂದ ಆಚೆ ಬರುವುದು ಹೇಗೆ? ಅಲ್ಲದೇ ಪರೀಕ್ಷೆಯ ನಂತರ ಸೀಟ್ ಆಯ್ಕೆ ಮಾಡಿಕೊಳ್ಳುವ ಸರಿಯಾದ ಕ್ರಮ ಯಾವುದು ಎಂಬುದರ ಬಗ್ಗೆ ಆಯಾ ವಿಷಯದಲ್ಲಿ ಪರಿಣಿತಿ ಹೊಂದಿರುವ ತಜ್ಞರು ವಿದ್ಯಾರ್ಥಿಗಳಿಗೆ ಅಗತ್ಯ ಮಾರ್ಗದರ್ಶನ ಮಾಡಲಿದ್ದಾರೆ.

ಅದೇ ರೀತಿ ಯುಪಿಎಸ್ಸಿ ಮತ್ತು ಕೆಪಿಎಸ್ಸಿ ಯಂತರ ನಾಗರೀಕ ಸೇವೆಗಳಿಗೆ ಸಿದ್ಧವಾಗುವಾಗ ಹೇಗೆ ಆಯ್ಕೆ ಮಾಡಿಕೊಳ್ಳಬೇಕು, ಈ ಪರೀಕ್ಷೆಗಳನ್ನು ಎದುರಿಸುವಾಗ ಎದುರಾಗುವ ಸಮಸ್ಯೆಗಳೇನು? ಅದಕ್ಕೆ ಪರಿಹಾರವೇನು ಎಂಬುದನ್ನೂ ಸಹ ತಜ್ಞರು ತಿಳಿಸಿಕೊಡಲಿದ್ದಾರೆ. ಜೊತೆಗೆ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳು ಸಂದರ್ಶನಗಳನ್ನ ಹೇಗೆ ಎದುರಿಸಬೇಕು ಎಂಬುದರ ಬಗ್ಗೆಯೂ ಮಾರ್ಗದರ್ಶನ ಮಾಡಲಿದ್ದಾರೆ.

ವಿಶೇಷ ಎಂಬಂತೆ ನಮ್ಮ ಎಕ್ಸ್ ಪೋ ನಲ್ಲಿ ಭಾಗವಹಿಸಿ ಕೋಚಿಂಗ್ ಸೆಂಟರ್‌ಗಳಲ್ಲಿ ನೋಂದಣಿ ಮಾಡಿಕೊಳ್ಳವ ಆಯ್ದ ಕೆಲವು ವಿದ್ಯಾರ್ಥಿಗಳಿಗೆ ನ್ಯೂಸ್ ಫಸ್ಟ್ ಸ್ಕಾಲರ್ ಶಿಪ್ ಸಹ ನೀಡಲು ಉದ್ದೇಶಿಸಿದೆ.

ಕೋಚಿಂಗ್ ಗುರು ಹೆಸರಿನಲ್ಲಿ ನಡೆಯುತ್ತಿರುವ ಈ ಮೆಗಾ ಎಕ್ಸ್ ಪೋ ಫೆಬ್ರವರಿ 1 ಮತ್ತು 2 ರಂದು ಬೆಂಗಳೂರು ಸಿಟಿ ವಿಶ್ವವಿದ್ಯಾಲಯದ ಆವರಣದಲ್ಲಿರುವ ಜ್ಞಾನಜ್ಯೋತಿ ಆವರಣ, ಪ್ಯಾಲೇಸ್ ರಸ್ತೆ, ಮೈಸೂರು ಬ್ಯಾಂಕ್ ಸಮೀಪ ಇಲ್ಲಿ ನಡೆಯಲಿದೆ.

ಈ ಕಾರ್ಯಕ್ರಮದಿಂದ ವಿದ್ಯಾರ್ಥಿಗಳಿಗೆ ಅತಿಹೆಚ್ಚಿನ ಲಾಭವಾಗುವ ಕಾರಣ. ಶಾಲಾ/ಕಾಲೇಜು ವಿದ್ಯಾರ್ಥಿಗಳು ಹಾಗೂ ಪೋಷಕರು ಈ ಎಕ್ಸ್ ಪೋ ನಲ್ಲಿ ಭಾಗವಹಿಸಿ ಅದರ ಲಾಭ ಪಡೆದುಕೊಳ್ಳಬಹುದಾಗಿದೆ.

## ಡಂಬಳ ಹೋಬಳಿಯ ವಿವಿಧ ಗ್ರಾಮಗಳಲ್ಲಿ ಕಾಮಗಾರಿಗಳಿಗೆ ಶಾಸಕ ಜಿ.ಎಸ್. ಪಾಟೀಲರಿಂದ ಭೂಮಿಪೂಜೆ

# ಕಾಂಗ್ರೆಸ್ ಪಕ್ಷದ ಮುಖ್ಯ ಉದ್ದೇಶವೇ ಅಭಿವೃದ್ಧಿ

■ವಿಜಯಸಾಕ್ಷಿ ಸುದ್ದಿ, ಡಂಬಳ

ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರ ನೇತೃತ್ವದ ಕಾಂಗ್ರೆಸ್ ಸರ್ಕಾರದಲ್ಲಿ ಅನುದಾನಕ್ಕೆ ಯಾವುದೇ ಕೊರತೆಯಿಲ್ಲ. ಒಂದೂವರೆ ವರ್ಷದಲ್ಲಿ ಈ ಕ್ಷೇತ್ರಕ್ಕೆ ತಂದ ಹಲವು ಅಭಿವೃದ್ಧಿ ಕಾಮಗಾರಿಗಳೇ ಇದಕ್ಕೆ ಸಾಕ್ಷಿಯಾಗಿವೆ ಎಂದು ರಾಜ್ಯ ಖನಿಜ ನಿಗಮದ ಅಧ್ಯಕ್ಷ, ಶಾಸಕರಾದ ಜಿ.ಎಸ್. ಪಾಟೀಲ್ ಹೇಳಿದರು. ಡಂಬಳ ಹೋಬಳಿಯ ವೆಂಕಟಾಪೂರ ಗ್ರಾಮದಲ್ಲಿ ಸೋಮವಾರ ಮುಖ್ಯಮಂತ್ರಿಗಳ ವಿಶೇಷ ಅನುದಾನದಲ್ಲಿ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆಯಡಿ 70 ಲಕ್ಷ ರೂ ವೆಚ್ಚದ ಸಿಸಿ ರಸ್ತೆ ಮತ್ತು ಚರಂಡಿ ನಿರ್ಮಾಣ, ಯಕ್ಲಾಸಪೂರ ಗ್ರಾಮದ ಎಸ್‌ಸಿ ಕಾಲೋನಿಯಿಂದ ಹಳ್ಳದವರೆಗೆ 20 ಲಕ್ಷ ರೂ ವೆಚ್ಚದ ಸಿಸಿ ರಸ್ತೆ, ಮುಜರಾಯಿ ಇಲಾಖೆಯಿಂದ 5 ಲಕ್ಷ ರೂ, ಪೇಠಾ ಆಲೂರ ಗ್ರಾಮದಲ್ಲಿ



ಪಂಚಾಯತ ರಾಜ್ ಹಾಗೂ ಸಣ್ಣ ನೀರಾವರಿ ಮತ್ತು ಅಂತರಜಲ ಅಭಿವೃದ್ಧಿ ವಿಭಾಗದಿಂದ 200 ಲಕ್ಷ ರೂ ಅನುದಾನದಲ್ಲಿ ಕೆರೆ ಸುಧಾರಣೆ ಕಾಮಗಾರಿ, 20 ಲಕ್ಷ ರೂ ವೆಚ್ಚದಲ್ಲಿ ಗೋವಿನಕೊಪ್ಪ ರಸ್ತೆಯಿಂದ ಶ್ರೀಹೊನ್ನಂತ್ಯಮ್ಮ ದೇವಾಸ್ಥಾನದವರೆಗೆ ಸಿಸಿ ರಸ್ತೆ, 13 ಲಕ್ಷ ರೂ ವೆಚ್ಚದ ಆಯುಷ್ ಆರೋಗ್ಯ ಯೋಗಾಸನ ಕಟ್ಟಡ ನಿರ್ಮಾಣ, ಡಂಬಳ ಗ್ರಾಮದಲ್ಲಿ 15 ಲಕ್ಷ ರೂ ಅನುದಾನದಲ್ಲಿ ಗುಡ್ಡದವರ ಮನೆಯಿಂದ ಸಿ.ಸಿ ರಸ್ತೆ, ಶಾಲೆಯ ಮುಂಭಾಗದ ರಸ್ತೆಯಲ್ಲಿ 16.50 ಲಕ್ಷ ರೂ ವೆಚ್ಚದ ಸಿ.ಸಿ ರಸ್ತೆ, 100 ಲಕ್ಷ ರೂ ವೆಚ್ಚದಲ್ಲಿ ನೂತನ ಕೆರೆ-ಕಾಲುವೆ ಅಭಿವೃದ್ಧಿ ಕಾಮಗಾರಿ, 10 ಲಕ್ಷ ರೂ ವೆಚ್ಚದಲ್ಲಿ ಕರಿಶಿದ್ದೇಶ್ವರ ದೇವಸ್ಥಾನ, 5 ಲಕ್ಷ ರೂ ಅನುದಾನದ ಮಹಿಳಾ ಸಂಘದ ಕಟ್ಟಡ, ಜಂತ್ಲಿ-ಶಿರೂರ ಗ್ರಾಮದಲ್ಲಿ 80 ಲಕ್ಷ ರೂ ಸಿಸಿ ರಸ್ತೆ, 100 ಲಕ್ಷ ರೂ ವೆಚ್ಚದ ಕೆರೆ ಕಾಲುವೆ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡುತ್ತಿದ್ದರು.

> ಕಾಂಗ್ರೆಸ್ ಪಕ್ಷದ ಮುಖ್ಯ ಉದ್ದೇಶವೇ ಅಭಿವೃದ್ಧಿಯಾಗಿದೆ. ಕ್ಷೇತ್ರದ ಜನರ ದೂರದೃಷ್ಟಿ ಇಟ್ಟುಕೊಂಡು ಅಂತರ್ಜಲ ವೃದ್ಧಿ ಮಾಡುವುದು ಹಾಗೂ ಜನರಿಗೆ ಸಮರ್ಪಕ ರಸ್ತೆ ನಿರ್ಮಿಸಲಾಗುತ್ತಿದೆ. ಅಭಿವೃದ್ಧಿ ಕೆಲಸದಲ್ಲಿ ಹಿಂದೆ ಹೋಗುವುದಿಲ್ಲ. ಏನೇ ಅಭಿವೃದ್ಧಿ ಕೆಲಸ ಆಗಬೇಕಾದರೂ ನಮ್ಮ ಗಮನಕ್ಕೆ ತಂದರೆ ಮಾಡಲಾಗುವುದೆಂದು ಶಾಸಕ ಜಿ.ಎಸ್. ಪಾಟೀಲ ಆಶ್ವಾಸನೆ ನೀಡಿದರು.

▶▶3ನೇ ಪುಟಕ್ಕೆ

## ನಗರಸಭೆ ಅಧ್ಯಕ್ಷರ ಚುನಾವಣೆ ವಿಳಂಬ ಆರೋಪ | ಬಿಜೆಪಿ ಸದಸ್ಯರಿಂದ ಪ್ರತಿಭಟನೆ

# ಕಾನೂನು ಉಲ್ಲಂಘನೆಗೆ ಅಸಮಾಧಾನ

■ವಿಜಯಸಾಕ್ಷಿ ಸುದ್ದಿ, ಗದಗ

ನಗರಸಭೆಯ ಎರಡನೇ ಅವಧಿಗೆ ನಡೆಯಬೇಕಿದ್ದ ಅಧ್ಯಕ್ಷರ ಚುನಾವಣೆಯಲ್ಲಿ ವಿಳಂಬ ಮಾಡುತ್ತಿರುವ ಹಿನ್ನೆಲೆಯಲ್ಲಿ ಬಿಜೆಪಿ ನಗರಸಭೆ ಸದಸ್ಯರಿಂದ ನಗರದ ಉಪವಿಭಾಗಾಧಿಕಾರಿ ಕಛೇರಿ ಎದುರು ಪ್ರತಿಭಟನೆ ನಡೆಸಲಾಯಿತು.

ಕಳೆದ ಆರು ತಿಂಗಳಿನಿಂದ ನಗರಸಭೆ ಅಧ್ಯಕ್ಷರ ಚುನಾವಣೆ ನಡೆದಿಲ್ಲ ಎಂದು ಎಸಿ ಕಛೇರಿ ಮುಂಭಾಗದಲ್ಲಿ ಪ್ರತಿಭಟನೆ ನಡೆಸಿ, ಕಾನೂನು ಸಚಿವ ಡಾ. ಎಚ್. ಕೆ. ಪಾಟೀಲರ ತವರೂರಲ್ಲಿ ಕಾನೂನು ಉಲ್ಲಂಘನೆ ಆಗುತ್ತಿದೆ ಎಂದು ಸಚಿವರ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

ನಗರಸಭೆಯಲ್ಲಿ ಬಿಜೆಪಿಗೆ ಸ್ಪಷ್ಟ ಬಹುಮತವಿರುವ ಹಿನ್ನೆಲೆಯಲ್ಲಿ ದ್ವೇಷಪೂರಿತ ರಾಜಕಾರಣ



ಮಾಡಲಾಗುತ್ತಿರುವುದು ಅವಳಿ ನಗರದ ಜನತೆಯ ಆಕ್ರೋಶಕ್ಕೆ ಕಾರಣವಾಗಿದೆ. ಇದರಿಂದಾಗಿ ನಗರದಲ್ಲಿ ಮೂಲಭೂತ ಸೌಲಭ್ಯಗಳಿಂದ ವಂಚಿತರಾಗುತ್ತಿದ್ದಾರೆ. ಕೂಡಲೇ ಚುನಾವಣೆಯ ದಿನಾಂಕ ಘೋಷಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

> ಹೈಕೋರ್ಟ್‌ನ ಅಧಿಕೃತ ಆದೇಶದ ಪತ್ರ ನನ್ನ ಕಚೇರಿಗೆ ಇನ್ನೂ ತಲುಪಿಲ್ಲ. ಭಾರತೀಯ ಜನತಾ ಪಕ್ಷದ ಸದಸ್ಯರು ಆದೇಶದ ಪ್ರತಿಯನ್ನು ಜನವರಿ 10ರಂದು ನೀಡಿದ್ದಾರೆ. ಅದರ ಆಧಾರದ ಮೇಲೆ ನಗರಸಭೆಯ ಅಧ್ಯಕ್ಷರ ಚುನಾವಣೆಯ ಮತದಾರರ ಪಟ್ಟಿಯನ್ನು ನೀಡುವಂತೆ ಪೌರಾಯುಕ್ತರಿಗೆ ಈಗಾಗಲೇ ಸೂಚಿಸಿದ್ದು, ಫೆಬ್ರುವರಿ 2ನೇ ವಾರದಲ್ಲಿ ನಗರಸಭೆ ಅಧ್ಯಕ್ಷರ ಚುನಾವಣೆ ನಡೆಯಲಿದೆ.
>
> – ಗಂಗಪ್ಪ ಎಂ.
> ಉಪವಿಭಾಗಾಧಿಕಾರಿ, ಗದಗ.

▶▶3ನೇ ಪುಟಕ್ಕೆ

# ಸಿ.ಸಿ. ರಸ್ತೆ ಕಾಮಗಾರಿಗೆ ಸಚಿವ ಎಚ್.ಕೆ.ಪಾಟೀಲ ಚಾಲನೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ನಗರದ ವಾರ್ಡ್ ನಂ. 22 ರಲ್ಲಿ ಜಿಲ್ಲಾ ಪಂಚಾಯತ್ , ಜಿಲ್ಲಾಡಳಿತ ಹಾಗೂ ತಾಲೂಕು ಆಡಳಿತದಿಂದ ಏರ್ಪಡಿಸಿದ್ದ 2023-24ನೇ ಸಾಲಿನ ಅಲ್ಪಸಂಖ್ಯಾತರ ಕಾಲೋನಿ ಅಭಿವೃದ್ಧಿ ಯೋಜನೆಯಡಿ ಸಿ.ಸಿ.ರಸ್ತೆ ಕಾಮಗಾರಿಗೆ ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ



ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ, ತಾಲೂಕಾ ಅಧ್ಯಕ್ಷ ಅಶೋಕ ಮಂದಾಲಿ, ಪ್ರಭು ಬುರಬುರೆ, ನಗರಸಭೆ ಸದಸ್ಯರುಗಳಾದ ಚಿಮ್ಮಿ ನದಾಫ್, ರವಿ ಕಮತರ, ಲಕ್ಷ್ಮೀ ಸಿದ್ಧಮ್ಮನಹಳ್ಳಿ, ಲಲಿತಾ ಅಸೂಟಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೊಟ್ಟೂರ, ನಗರಸಭೆ ಪೌರಾಯುಕ್ತ ಮಹೇಶ ಪೋತದಾರ, ಇಂಜನೀಯರ್ ಹುಚ್ಚೇಶ್ವರ ಬಂಡಿವಡ್ಡರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕಿ ಪದ್ಮಾವತಿ ಜಿ, ವಾರ್ತಾಧಿಕಾರಿ ವಸಂತ ಮಡ್ಲೂರ ಸೇರಿದಂತೆ ಇತರರು ಇದ್ದರು.

## ಜ.30ರಂದು ಕಸಾಯಿಖಾನೆ, ಮಾಂಸ ಮಾರಾಟ ಬಂದ್

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯ ಕಸಾಯಿಖಾನೆಗಳಲ್ಲಿ ಪ್ರಾಣಿವಧೆ ಮಾಡುವ ಹಾಗೂ ಮಾಂಸ ಮಾರಾಟಗಾರರಿಗೆ ತಿಳಿಯಪಡಿಸುವುದೇನೆಂದರೆ, ಸರ್ವೋದಯ ದಿನದ ಅಂಗವಾಗಿ ಜನವರಿ 30 ರಂದು ಜಾನುವಾರುಗಳ ವಧೆ ಹಾಗೂ ಮಾಂಸ ಮಾರಾಟ ಮಾಡುವುದನ್ನು ನಿಷೇಧಿಸಲಾಗಿದೆ. ಮಾಂಸ ಮಾರಾಟ ಮಾಡದಿರಲು ಹಾಗೂ ಜಾನುವಾರುಗಳನ್ನು ವಧೆ ಮಾಡದಿರಲು ಸೂಚಿಸಲಾಗಿದೆ. ಈ ಆದೇಶವನ್ನು ಉಲ್ಲಂಘಿಸಿದಲ್ಲಿ ಅಂಥವರ ಲೈಸನ್ಸ್ ರದ್ದು ಮಾಡಲಾಗುವುದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೃತ ಬಾಲಕರ ಕುಟುಂಬಸ್ಥರಿಗೆ ಚೆಕ್ ವಿತರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚಿಗೆ ಸವದತ್ತಿ ಎಲ್ಲಮ್ಮ ಗುಡ್ಡದ ಪ್ರದೇಶದಲ್ಲಿ ಈಜಲು ಹೋಗಿ ಮೃತರಾದ ನಗರದ ತಳಗೇರಿ ಓಣಿಯ ಬಾಲಕರಾದ ಸಚ್ಚಿದಾನಂದ ಕಟ್ಟಿಮನಿ ಹಾಗೂ ವೀರೇಶ ಕಟ್ಟಿಮನಿ ಅವರ ಮನೆಗೆ ತೆರಳಿ ಕುಟುಂಬಸ್ಥರಿಗೆ ಸಾಂತ್ವನ ಹೇಳಿ ಮೃತರ ಕುಟುಂಬಸ್ಥರಿಗೆ ಸರ್ಕಾರದ ಪರವಾಗಿ ತಲಾ ಮೂರು ಲಕ್ಷ ರೂಗಳ ಚೆಕ್‌ಗಳನ್ನು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್. ಕೆ.ಪಾಟೀಲ ಅವರು ವಿತರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಬಾಳಿ ಬದುಕಿ ಜೀವನವನ್ನು ರೂಪಿಸಿಕೊಳ್ಳಬೇಕಾಗಿದ್ದ ಬಾಲಕರ ಸಾವು ಅಘಾತ ತಂದಿದೆ. ಬೆಲೆ ಕಟ್ಟಲಾಗದ ಜೀವವನ್ನು ಕಳೆದುಕೊಂಡಿರುವ ಕುಟುಂಬಸ್ಥರಿಗೆ ದೇವರು ನೋವನ್ನು ಸಹಿಸುವ ಶಕ್ತಿ ನೀಡಲಿ. ಇಂತಹ ಕಷ್ಟದ ಸಮಯದಲ್ಲಿ ಸರ್ಕಾರ ಸದಾ ನಿಮ್ಮೊಂದಿಗೆ ಇದೆ ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕ್ಬರಸಾಬ ಬಬರ್ಚಿ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ., ತಹಸೀಲ್ದಾರ, ಶ್ರೀನಿವಾಸ್ ಮೂರ್ತಿ ಕುಲಕರ್ಣಿ, ನಗರಸಭೆ ಸದಸ್ಯರಾದ ಕೃಷ್ಣಾ ಪರಾಪುರ್, ಕೆಡಿಪಿ ಸದಸ್ಯರಾದ ಎಸ್. ಎನ್. ಬಳ್ಳಾರಿ, ಬಿ. ಬಿ.ಅಸೂಟಿ, ವಿಜಯ ಕಲ್ಮನಿ, ಅಶೋಕ ಮಂದಾಲಿ, ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

## ಅಂಗನವಾಡಿ ಕಟ್ಟಡಗಳ ನಿರ್ಮಾಣಕ್ಕೆ ಸಚಿವ ಎಚ್.ಕೆ. ಪಾಟೀಲ ಚಾಲನೆ

# ಉತ್ತಮ ಸೌಕರ್ಯಗಳೊಂದಿಗೆ ಶಿಕ್ಷಣ ದೊರೆಯಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಚಿಕ್ಕಮಕ್ಕಳಿಗೆ ಆರಂಭದಿಂದಲೇ ಉತ್ತಮ ಸೌಕರ್ಯಗಳೊಂದಿಗೆ ಶಿಕ್ಷಣ ದೊರೆಯಬೇಕು. ಈ ಉದ್ದೇಶದಿಂದ ನಗರದಲ್ಲಿ ಇಂದು ಅಂಗನವಾಡಿ ಕಟ್ಟಡಗಳ ನಿರ್ಮಾಣಕ್ಕೆ ಚಾಲನೆ ನೀಡಲಾಗಿದೆ ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ತಿಳಿಸಿದರು.

ನಗರದ ವಿವಿಧ ಪ್ರದೇಶಗಳಲ್ಲಿ ಸೋಮವಾರ ನಗರಸಭೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದಲ್ಲಿ ಏರ್ಪಡಿಸಿದ್ದ ಅಂಗನವಾಡಿ ಕಟ್ಟಡಗಳ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿ ಸಚಿವರು ಮಾತನಾಡಿದರು.

ವಾರ್ಡ್ ನಂ. 21ರಲ್ಲಿ



ಅಂದಾಜು 31.50 ಲಕ್ಷ ವೆಚ್ಚದಲ್ಲಿ ಅಂಗನವಾಡಿ ನಿರ್ಮಾಣ ಕಾಮಗಾರಿಗೆ ಸಚಿವರು ಚಾಲನೆ ನೀಡಿದರು.

ವಾರ್ಡ್ ನಂ. 22ರಲ್ಲಿ 31.50 ಲಕ್ಷ ಅಂದಾಜು ವೆಚ್ಚದಲ್ಲಿ, ವಾರ್ಡ್ ನಂ. 1ರಲ್ಲಿ 36.50 ಲಕ್ಷ ವೆಚ್ಚದಲ್ಲಿ ಹಾಗೂ ವಾರ್ಡ್ ನಂ. 27ರಲ್ಲಿ 31.50 ಲಕ್ಷ ವೆಚ್ಚದಲ್ಲಿ ಅಂಗನವಾಡಿಗಳ ನಿರ್ಮಾಣ ಕಾಮಗಾರಿಗೆ ಸಚಿವ ಎಚ್.ಕೆ. ಪಾಟೀಲ ಚಾಲನೆ ನೀಡಿದರು.

ಇದೇ ಸಂದರ್ಭದಲ್ಲಿ ಸಚಿವ ಎಚ್.ಕೆ. ಪಾಟೀಲ ಅವರು ಅಂತಾರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆ ಅಂಗವಾಗಿ ಅಂಗನವಾಡಿ ಮಕ್ಕಳಿಗೆ ಕೇಕ್ ತಿನ್ನಿಸುವ ಮೂಲಕ ಶುಭಾಶಯ ಕೋರಿದರು.

ಈ ಸಂದರ್ಭದಲ್ಲಿ ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕಾಧ್ಯಕ್ಷ ಅಶೋಕ ಮಂದಾಲಿ, ಪ್ರಭು ಬುರಬುರೆ, ನಗರಸಭೆ ಸದಸ್ಯರುಗಳಾದ ಚಿಮ್ಮಿ ನದಾಫ್, ರವಿ ಕಮತರ, ಲಕ್ಷ್ಮೀ ಸಿದ್ಧಮ್ಮನಹಳ್ಳಿ, ಲಲಿತಾ ಅಸೂಟಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೊಟ್ಟೂರ, ನಗರಸಭೆ ಪೌರಾಯುಕ್ತ ಮಹೇಶಪೋತದಾರ, ಇಂಜಿನಿಯರ್ ಹುಚ್ಚೇಶ್ವರ ಬಂಡಿವಡ್ಡರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಪದ್ಮಾವತಿ ಜಿ ಸೇರಿದಂತೆ ಇತರರು ಇದ್ದರು.

> ಅಂಗನವಾಡಿ ಕಟ್ಟಡಗಳು ಸುಸಜ್ಜಿತವಾಗಿ ನಿಗದಿತ ಕಾಲಾವಧಿಯಲ್ಲಿ ಪೂರ್ಣಗೊಳ್ಳಬೇಕು. ಕಳಪೆ ಕಾಮಗಾರಿಗೆ ಅವಕಾಶವಿಲ್ಲದಂತೆ ಸ್ಥಳೀಯ ಜನಪ್ರತಿನಿಧಿಗಳು ನಿಗಾ ವಹಿಸಬೇಕು. ಕಾಮಗಾರಿಗಳು ಶಿಸ್ತುಬದ್ಧವಾಗಿ ಗುಣಮಟ್ಟದಿಂದ ಕೂಡಿರುವಂತೆ ಸಂಬಂಧಿಸಿದವರು ಕ್ರಮ ಕೈಗೊಳ್ಳಬೇಕೆಂದು ಸಚಿವ ಎಚ್. ಕೆ. ಪಾಟೀಲ ಸೂಚಿಸಿದರು.

## ಸಾಕ್ಷಿ ಸುಭಾಷಿತ

**ಜೀವನದ ಅತ್ಯಂತ ಅಮೂಲ್ಯ ಸಮಯವನ್ನು ಕೋಪ, ವಿಷಾದ, ಚಿಂತೆ ಮತ್ತು ದ್ವೇಷದಲ್ಲಿ ವ್ಯರ್ಥ ಮಾಡುವುದು ಬೇಡ. ಅತೃಪ್ತಿ ಹೊಂದಲು ಜೀವನವು ತುಂಬಾ ಚಿಕ್ಕದಾಗಿದೆ. –ಸುಭಾಷಿತ**

## ಸಂಪಾದಕೀಯ

# ಇನ್ನೂ ನಿಂತಿಲ್ಲ ಬಾಣಂತಿ ಸಾವು

ಬಳ್ಳಾರಿಯಲ್ಲಿ ನಡೆದ ಬಾಣಂತಿಯರ ಸಾವಿನ ಘಟನೆ ರಾಜ್ಯಾದ್ಯಂತ ಭಾರೀ ಚರ್ಚೆಗೆ ಕಾರಣವಾಗಿದೆ. ಬಳ್ಳಾರಿ ಮಾತ್ರವಲ್ಲದೇ ರಾಜ್ಯದ ಇನ್ನಿತರ ಜಿಲ್ಲಾ ಆಸ್ಪತ್ರೆಗಳಲ್ಲೂ ಬಾಣಂತಿ, ಗರ್ಭಿಣಿಯರ ಸಾವು ಸಂಭವಿಸುತ್ತಲೆ ಇದೆ.

ರಾಜ್ಯ ಸರಕಾರ ಬಾಣಂತಿ ಸಾವಿನ ವಿಷಯವನ್ನ ಗಂಭೀರವಾಗಿ ಪರಿಗಣಿಸಿದೆ. ಅದೇ ರೀತಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವ ಭರವಸೆ ನೀಡಿದೆ. ಆದರೆ ಇದು ಕೇವಲ ಬಳ್ಳಾರಿಯಲ್ಲಿ ನಡೆಯುವ ದುರ್ಘಟನೆ ಮಾತ್ರವಲ್ಲ, ದೇಶಾದ್ಯಂತ, ರಾಜ್ಯಾದ್ಯಂತ ನಿತ್ಯ ನಡೆಯುವ ಸರಕಾರಿ ಕೊಲೆಗಳಾಗಿವೆ.

ಇದಕ್ಕೆ ಮುಖ್ಯ ಕಾರಣ ವೈದ್ಯಕೀಯ ಸೇವೆ. ಈಗಲೂ ಸರಕಾರಿ ಆಸ್ಪತ್ರೆಗಳಲ್ಲಿ ಗುಣಮಟ್ಟದ ಚಿಕಿತ್ಸೆ ಮರೀಚಿಕೆಯಾಗಿದೆ. ಬಡವರಿಗೆ ಗೌರವಯುತವಾಗಿ ನಡೆಸಿಕೊಂಡು ಚಿಕಿತ್ಸೆ ನೀಡುವಂಥ ಒಂದೇ ಒಂದು ಮಾದರಿ ಆಸ್ಪತ್ರೆ ರಾಜ್ಯದಲ್ಲಿಲ್ಲ. ವಿಶೇಷವಾಗಿ ಗರ್ಭಿಣಿ, ಬಾಣಂತಿಯರಿಗೆ ಆರೈಕೆ ಮಾಡುವ ಮನಸ್ಥಿತಿ ಸರಕಾರಿ ಆಸ್ಪತ್ರೆಗಳಲ್ಲಿಲ್ಲ.

ಈ ಕಾರಣಕ್ಕಾಗಿ ಇವತ್ತು ಬಾಣಂತಿ ಸಾವುಗಳು ಸಂಭವಿಸುತ್ತಿವೆ. ಗರ್ಭಿಣಿ, ಬಾಣಂತಿಯರಿಗೆ ಸಕಾಲದಲ್ಲಿ ಚಿಕಿತ್ಸೆ ಸಿಗಬೇಕು. ಅದನ್ನು ಸರಕಾರಿ ಆಸ್ಪತ್ರೆಯಲ್ಲಿ ನಿರೀಕ್ಷೆ ಮಾಡುವುದೂ ಕಷ್ಟ. ಇನ್ನು ಖಾಸಗಿ ಆಸ್ಪತ್ರೆಗೆ ಹೋದರೆ ಸಾಮಾನ್ಯ ಹೆರಿಗೆ ಸಾಧ್ಯವೇ ಇಲ್ಲದಂಥ ಪರಿಸ್ಥಿತಿ ಎದುರಾಗಿದೆ.

ಒಂದೆಡೆ ದೇಶದ ಫಲವಂತಿಕೆ ದರ ಕಡಿಮೆಯಾಗುತ್ತಿದ್ದರೆ, ಮತ್ತೊಂದೆಡೆ ಬಾಣಂತಿಯರ ಸಾವು ಸಂಭವಿಸುತ್ತಿದೆ. ಇದಕ್ಕೆ ಕಡಿವಾಣ ಹಾಕಬೇಕಾದರೆ ಬಡವರಿಗೆ ಗುಣಮಟ್ಟದ ಚಿಕಿತ್ಸೆ ದೊರೆಯಬೇಕು. ಸರಕಾರಿ ಆಸ್ಪತ್ರೆಗಳು ಬಲಗೊಳ್ಳಬೇಕು. ಮುಖ್ಯವಾಗಿ ಸರಕಾರಕ್ಕೆ ಇಚ್ಛಾಶಕ್ತಿ ಬೇಕು. ಸರಕಾರಿ ಆಸ್ಪತ್ರೆಗಳ ಬಲವರ್ಧನೆಯಿಂದ ಮಾತ್ರವೇ ಬಾಣಂತಿಯರ ಸಾವು ತಡೆಯಲು ಸಾಧ್ಯ ಎನ್ನವುದನ್ನು ಸರಕಾರ ಅರ್ಥ ಮಾಡಿಕೊಳ್ಳಬೇಕು.

# ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ಅವಳಿ ನಗರದಲ್ಲಿ ಜನವರಿ 28 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 29, ಸಾಯಿನಗರ, ಸಾಯಿನಾಥ ಗುಡಿ ಹಿಂದಿನ ಭಾಗ, ರಿಂಗ್ ರೋಡ್, ಪತಂಜಲಿ ಯೋಗ ಮಂದಿರ, ದೇವರಾಜ್ ಹಾಸ್ಟೆಲ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 22 – ಗಂಗಿಮಡಿ, ದಖನಿಯವರ ಲೈನ್, ಈಶ್ವರ ಗುಡಿ ಲೈನ್, ಗಿರಣಿ ಲೈನ್, ಶಿವಪ್ಪರವರ ಲೈನ್, ಧಾರವಾಡದವರ ಲೈನ್ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 19, 24, 25 – ಕುರುಬರ ಗರಡಿ, ಮಾಬು ಸುಭಾನಿ ಕಟ್ಟಿ, ಕೊಪ್ಪದವರ ಲೈನ್, ಹಾಳದಿಬ್ಬ 3 ಭಾಗಗಳು, ಜೀರ ಓಣಿ, ಅಬ್ಬಿಗೇರಿ ಲೈನ್, ಕರುಗಲ್ ಓಣಿ, ಖಾನ ತೋಟ ಭಾಗ–1. ವಾರ್ಡ್ ನಂ. 6, 7, 10– ಕುಲಕರ್ಣಿ ದಿಬ್ಬದ ಭಾಗ, ಹರಿಜನಕೇರಿ 2 ಭಾಗ, ಪೆಂಡಾರ ಓಣಿ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 34 – ನಂದೀಶ್ವರನಗರ, ಪುರದ ದವಾಖಾನೆ ಹಿಂದಿನ ಭಾಗ, 20 ನಂಬರ ಶಾಲೆ. ವಾರ್ಡ್ ನಂ. 35 – ಬಾಲಾಜಿನಗರ, ವಿಶ್ವೇಶ್ವರಯ್ಯ ನಗರ, 9 ನಂ. ಶಾಲೆ ಉಳಿದ ಕೆಲವು ಭಾಗಗಳು.

ಪ್ರಕಟಣೆ : ಗದಗ–ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ತುಂಗಭದ್ರಾ ನದಿಯಿಂದ ಸರಬರಾಜು ಆಗುತ್ತಿರುವ ನೀರನ್ನು ಕಾಯಿಸಿ ಆರಿಸಿ ಕುಡಿಯಲು ನಿರ್ದೇಶನ ನೀಡಲಾಗಿದೆ ಹಾಗೂ ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ನಗರಸಭೆ ಪೌರಾಯುಕ್ತರು ತಿಳಿಸಿದ್ದಾರೆ.. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ ಮಾಡಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಮೃತರ ಕುಟುಂಬದ ಸದಸ್ಯರಿಗೆ ಸಾಂತ್ವನ



■ ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಸವದತ್ತಿಯ ಯಲ್ಲಮ್ಮನ ದೇವಸ್ಥಾನಕ್ಕೆ ದರ್ಶನ ಪಡೆಯಲು ಹೋದ ಸಂದರ್ಭದಲ್ಲಿ ಗದಗ ತಳಗೇರಿ ಓಣಿಯ ಮಾದಿಗ ಸಮಾಜದ ಕಟ್ಟಿಮನಿ ಕುಟುಂಬದ ವೀರೇಶ ಹಾಗೂ ಸಚಿನ್ ಎಂಬ ಇಬ್ಬರು ಮಕ್ಕಳು ನದಿಯಲ್ಲಿ ಸ್ನಾನ ಮಾಡುವಾಗ ಕಾಲುಜಾರಿ ಬಿದ್ದು ಮರಣ ಹೊಂದಿದ್ದು ದುರ್ದೈವ ಹಾಗೂ ಆಘಾತಕಾರಿ ಸಂಗತಿ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ವಿಷಾದ ವ್ಯಕ್ತಪಡಿಸಿದರು.

ಈ ಹಿನ್ನೆಲೆಯಲ್ಲಿ ಅವರು ಕಟ್ಟಿಮನಿ ಕುಟುಂಬದವರನ್ನು ಭೇಟಿ ಮಾಡಿ, ಅವರ ತಾಯಂದಿರಾದ ಪುಷ್ಪಾ ಮರಿಯಪ್ಪ ಕಟ್ಟಿಮನಿ ಹಾಗೂ ಲತಾ ಗೋಪಾಲ ಕಟ್ಟಿಮನಿ ಇವರಿಗೆ ಸಾಂತ್ವನ ಹೇಳಿದರು. ಅಲ್ಲದೇ ಗದಗ ಜಿಲ್ಲಾಧಿಕಾರಿಗಳ ಜೊತೆ ದೂರವಾಣಿ ಮೂಲಕ ಮಾತನಾಡಿ ಸರ್ಕಾರದಿಂದ ಪರಿಹಾರ ನೀಡಲು ವಿನಂತಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿಗಳು, ಸರ್ಕಾರಕ್ಕೆ ಪ್ರಸ್ತಾವನೆ ಕಳಿಸಿ ತಕ್ಷಣವೇ ಮೃತ ಕುಟುಂಬದವರಿಗೆ ಸರ್ಕಾರದಿಂದ ಪರಿಹಾರ ಒದಗಿಸಲು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾ ಅಧ್ಯಕ್ಷ ರಾಜು ಕುರಡಗಿ, ಲಕ್ಷ್ಮಣ ದೊಡ್ಡಮನಿ, ಮಂಜುನಾಥ ಕೋಟ್ನಿಕಲ್, ಅಶೋಕ ಕುಡತಿನಿ, ಹುಡಚಪ್ಪ ಹಳ್ಳಿಕೇರಿ, ವಿಜಯ ಕಲ್ಮನಿ, ಪದ್ಮಿನಿ ಮುತ್ತಲದಿನ್ನಿ, ರಾಘು ಪರಾಪೂರ, ಅನಿಲ ಅಬ್ಬಿಗೇರಿ, ಶಶಿಧರ ದಿಂಡೂರ, ರಮೇಶ ಸಜ್ಜಗಾರ ಸೇರಿದಂತೆ ಸಮಾಜದ ಹಿರಿಯರು ಇದ್ದರು.

### 76ನೇ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿದ ಸಚಿವ ಸಂತೋಷ್ ಲಾಡ್

# ಸಂವಿಧಾನದ ಮೌಲ್ಯವನ್ನು ಜೀವನದಲ್ಲಿ ಅಳವಡಿಸಿಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಭಾರತದ ಸಂವಿಧಾನವನ್ನು ಪ್ರತಿಯೊಬ್ಬರೂ ಓದಬೇಕು. ಸಂವಿಧಾನ ಪೀಠಿಕೆಯಲ್ಲಿ ಹೇಳಿರುವ ಮೌಲ್ಯಗಳನ್ನು ಅಳವಡಿಸಿಕೊಳ್ಳುವುದರ ಮೂಲಕ ದೇಶದ ಅಭಿವೃದ್ಧಿಗೆ ವಿಶೇಷವಾಗಿ ಯುವ ಸಮೂಹ ತೊಡಗಿಸಿಕೊಳ್ಳಬೇಕೆಂದು ಕಾರ್ಮಿಕ ಇಲಾಖೆ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಎಸ್.ಲಾಡ್ ಹೇಳಿದರು.

ಅವರು ರವಿವಾರ ಬೆಳಿಗ್ಗೆ ಆರ್.ಎನ್. ಶೆಟ್ಟಿ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತದಿಂದ ಆಯೋಜಿಸಿದ್ದ 76ನೇ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡಿದರು.

ಭಾರತವು ಎಲ್ಲ ಧರ್ಮದವರಿಗೂ ಸೇರಿದ್ದು, ಯಾವುದೇ ಪಕ್ಷ, ಧರ್ಮಗಳಿಗೆ ಮೀಸಲಾಗಿಲ್ಲ. ಡಾ. ಬಿ.ಆರ್. ಅಂಬೇಡ್ಕರ ಅವರು ರಚಿಸಿರುವ ಸಂವಿಧಾನವು ಪ್ರತಿಯೊಬ್ಬರ ಸಮಗ್ರ ಅಭಿವೃದ್ಧಿಗೆ ಮತ್ತು ಸಮಾಜದ ಹಿತಕ್ಕೆ ಪೂರಕವಾದ ಅಂಶಗಳನ್ನು ನೀಡಿದೆ. ಪ್ರತಿಯೊಬ್ಬರೂ ಪ್ರತಿದಿನ ಸಂವಿಧಾನ ಪೀಠಿಕೆಯನ್ನು ಓದುಬೇಕು. ಪಿಠೀಕೆಯಲ್ಲಿ ಇರುವ ಮೌಲ್ಯಗಳನ್ನು ಅರ್ಥೈಸಿಕೊಂಡು ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ತಿಳಿಸಿದರು.

ಗಣರಾಜ್ಯೋತ್ಸವ ಭಾರತದ ಒಂದು ರಾಷ್ಟ್ರೀಯ ಹಬ್ಬ. ದೇಶಕ್ಕೆ ಪ್ರಜಾಪ್ರಭುತ್ವದ ಆಡಳಿತ ಪದ್ಧತಿಯನ್ನು ಅಳವಡಿಸಿಕೊಂಡ ಸಂಭ್ರಮದ ದಿನವಾಗಿದೆ. ಡಾ. ಬಿ.ಆರ್. ಅಂಬೇಡ್ಕರ್ ಅವರನ್ನು ಭಾರತ ಸಂವಿಧಾನದ ಪಿತಾಮಹ ಎನ್ನುತ್ತಾರೆ. ನಮ್ಮ ಸ್ವಾತಂತ್ರ್ಯ ಹೋರಾಟಗಾರರು, ನಮ್ಮ ನಾಯಕರು



ಮತ್ತು ನಮ್ಮ ಸಂವಿಧಾನದ ರಚನೆಗೆ ಕೊಡುಗೆ ನೀಡಿದ ಪ್ರತಿಯೊಬ್ಬ ವ್ಯಕ್ತಿಯನ್ನು ನೆನಪಿಸಿಕೊಳ್ಳಲು ಈ ಅವಕಾಶವನ್ನು ಬಳಸಿಕೊಳ್ಳೋಣ ಎಂದು ಸಚಿವರು ತಿಳಿಸಿದರು.

ಒಂದು ದೇಶವಾಗಿ ನಾವು ಸಾಕಷ್ಟು ಆರ್ಥಿಕ ಸುಧಾರಣೆಗಳು ಮತ್ತು ಯಶಸ್ಸನ್ನು ಕಂಡಿದ್ದರೂ, ಬಡತನ ಮತ್ತು ನಿರುದ್ಯೋಗದಂತಹ ಸವಾಲುಗಳು ಈಗಲೂ ನಮ್ಮ ಮುಂದಿವೆ. ಈ ಸವಾಲುಗಳನ್ನು ಎದುರಿಸಿ ಹೊರಬರುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಸಚಿವರು ತಿಳಿಸಿದರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಿದ ಸಾಧಕರನ್ನು ಸನ್ಮಾನಿಸಿ, ಗೌರವಿಸಲಾಯಿತು. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ದಿವಗಂತ ರೋಹಿತ ಕುಂಬಾರ ಇವರ ಅಂಗಾಂಗ ದಾನ ಮಾಡಿದ ಕುಟುಂಬಕ್ಕೆ, ಮಾನವ ಸರಪಳಿ ಕಾರ್ಯಕ್ರಮದಲ್ಲಿ ವಿಶೇಷ ಸೇವೆ ಸಲ್ಲಿಸಿದ್ದಾಕ್ಕಾಗಿ ಶ್ರೀ ಸಿದ್ಧಾರೂಢ ಟ್ರಸ್ಟ್‌ಗೆ ಹಾಗೂ ಇಸ್ಕಾನ್ ಸಂಸ್ಥೆಗಳಿಗೆ ಕಾರ್ಮಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್.ಲಾಡ್ ಸನ್ಮಾನಿಸಿ, ಪ್ರಮಾಣಪತ್ರದೊಂದಿಗೆ ಗೌರವಿಸಿದರು.

ಈ ಸಂದರ್ಭದಲ್ಲಿ ಮಾಜಿ ಸಭಾಪತಿ ವೀರಣ್ಣ ಮತ್ತಿಗಟ್ಟಿ, ಹುಬ್ಬಳ್ಳಿ ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶಾಕೀರ್ ಸನದಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಎಸ್.ಆರ್. ಪಾಟೀಲ, ಜಿಲ್ಲಾಧಿಕಾರಿ ದಿವ್ಯ ಪ್ರಭು, ಮಹಾನಗರ ಪೊಲೀಸ್ ಆಯುಕ್ತರಾದ ಎನ್.ಶಶಿಕುಮಾರ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಗೋಪಾಲ ಬ್ಯಾಕೋಡ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನಾರಾಯಣ ಬರಮನಿ, ಉಪಪೊಲೀಸ್ ಆಯುಕ್ತರಾದ ರವೀಶ ಸಿ.ಆರ್ ಮತ್ತು ಮಾನಿಂಗ ನಂದಗಾವಿ, ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಉಪವಿಭಾಗಾಧಿಕಾರಿ ಶಾಲಂ ಹುಸೇನ್, ಜಿ.ಪಂ ಉಪಕಾರ್ಯದರ್ಶಿ ಬಿ.ಎಸ್. ಮೂಗನೂರಮಠ, ಮುಖ್ಯ ಯೋಜನಾ ನಿರ್ದೇಶಕ ದೀಪಕ ಮಡಿವಾಳರ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಅಜೀಜ ದೇಸಾಯಿ, ಜಿಲ್ಲಾ ಆರೋಗ್ಯಾಧಿಕಾರಿ ಡಾ. ಶಶಿ ಪಾಟೀಲ, ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಎಸ್.ಎಸ್. ಕೆಳದಿಮಠ, ಧಾರವಾಡ ತಹಸೀಲ್ದಾರ ಡಿ.ಎಚ್. ಹೂಗಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ, ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಮಂಜುನಾಥಸ್ವಾಮಿ ಸೇರಿದಂತೆ ಜಿಲ್ಲಾ ಹಾಗೂ ತಾಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿ ಸಿಬ್ಬಂದಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ನಗರದ 150ಕ್ಕೂ ಹೆಚ್ಚು ವಿವಿಧ ಶಾಲಾ–ಕಾಲೇಜು ವಿದ್ಯಾರ್ಥಿಗಳು, ಇತರ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಶಾಲಾ ಶಿಕ್ಷಣ ಇಲಾಖೆಯ ವಿವಿಧ ಮಾಧ್ಯಮಿಕ ಮತ್ತು ಪ್ರೌಢ ಶಾಲೆಯ ವಿದ್ಯಾರ್ಥಿಗಳು ಗಣರಾಜ್ಯೋತ್ಸವದ ನಿಮಿತ್ತ ಆರ್.ಎನ್.ಶೆಟ್ಟಿ ಕ್ರೀಡಾಂಗಣದಲ್ಲಿ ಸಾಮೂಹಿಕ ನೃತ್ಯ, ದೇಶ ಭಕ್ತಿಗೀತೆ, ಗಾಯನ ಮತ್ತು ಛದ್ಮವೇಷದಾರಿಗಳಾಗಿ ವಿವಿಧ ಕಾರ್ಯಕ್ರಮಗಳನ್ನು ಪ್ರದರ್ಶಿಸಿದರು.

# ಕವಿತಾ ಬಡಿಗೇರರಿಗೆ ಡಾಕ್ಟರೇಟ್

■ ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಸಮಾಜ ಸೇವಕರು, ಕರವೇ ಮಹಿಳಾ ಘಟಕದ ಜಿಲ್ಲಾಧ್ಯಕ್ಷರೂ ಆದ ಕವಿತಾ ಪಾಂಡುರಂಗ ಬಡಿಗೇರ ಇವರಿಗೆ 2025ರ ಏಷಿಯಾ ಇಂಟರ್‌ನ್ಯಾಷನಲ್ ಕಲ್ಚರಲ್ ಅಕಾಡೆಮಿ ವತಿಯಿಂದ ಡಾಕ್ಟರೇಟ್ ನೀಡಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಮಾಸ್ಟರ್ ವಿ.



ಬಾಬು, ಡಾ. ಕೆ.ಎ. ಮನಕರಣ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

# ಜೆಡಿಎಸ್ ಕಾರ್ಯಾಲಯದಲ್ಲಿ ಗಣರಾಜ್ಯೋತ್ಸವ

■ ವಿಜಯಸಾಕ್ಷಿ ಸುದ್ದಿ, ಗದಗ

ಜೆಡಿಎಸ್ ಪಕ್ಷದ ಜಿಲ್ಲಾ ಕಾರ್ಯಾಲಯದಲ್ಲಿ 76ನೇ ಗಣರಾಜ್ಯೋತ್ಸವ ಧ್ವಜಾರೋಹಣವನ್ನು ಜೆಡಿಎಸ್ ಪಕ್ಷದ ಜಿಲ್ಲಾಧ್ಯಕ್ಷ ಎಂ.ವೈ. ಮುಧೋಳ ನೆರವೇರಿಸಿದರು. ಗಣರಾಜ್ಯೋತ್ಸವದ ಮಹತ್ವದ ಕುರಿತು ಜಿಲ್ಲಾ ಪ್ರಧಾನ



ಕಾರ್ಯದರ್ಶಿ ಹಾಜಿಅಲಿ ಎಚ್.ಕೊಪ್ಪಳ, ಹಿರಿಯರಾದ ಎಂ.ಎಸ್. ಪರ್ವತಗೌಡ್ರ ಮಾತನಾಡಿದರು.

ಕಾರ್ಯಕ್ರಮದಲ್ಲಿ ಪಕ್ಷದ ಮುಖಂಡರಾದ ಈರಣ್ಣ ಬಾಳಿಕಾಯಿ, ಗಿರೀಶ್ ಸಂಶಿ, ಸಿರಾಜ ಕದಡಿ, ಲಕ್ಷ್ಮಣ ಹಳ್ಳಿಕೇರಿ, ಲಕ್ಷ್ಮಣ ನಾಯಕ, ಕೆ.ಎಫ್. ದೊಡ್ಮನಿ, ಪ್ರಫುಲ್ ಪುಣೆಕರ, ಸಂತೋಷ್ ಪಾಟೀಲ, ಬಾದಶಾಹ ಬಾಗವಾನ, ರಾಜೇಸಾಬ ತಹಸೀಲ್ದಾರ, ಪಂ. ಪುಟ್ಟರಾಜ ರೈತ ಸಂಘದ ಸಂಸ್ಥಾಪಕ ಅಧ್ಯಕ್ಷರಾದ ಎಂ.ಪಿ. ಮುಳುಗುಂದ ಹಾಗೂ ಸಂಘದ ಪದಾಧಿಕಾರಿಗಳು ಪಾಲ್ಗೊಂಡಿದ್ದರು.

# ಪ್ರತಿಭಾ ಕಾರಂಜಿ: ರಾಜ್ಯ ಮಟ್ಟಕ್ಕೆ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಕಿತ್ತೂರ ರಾಣಿ ಚನ್ನಮ್ಮ ವಸತಿ ಶಾಲೆಯ ವಿದ್ಯಾರ್ಥಿಗಳು ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ ಸ್ಪರ್ಧೆಯಲ್ಲಿ ಭಾಗವಹಿಸಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಶನಿವಾರ ಗದಗ ನಗರದ ಲೈಲಾ ಕಾನ್ವೆಂಟ್ ಶಾಲೆಯಲ್ಲಿ ಜಿಲ್ಲಾ ಪಂಚಾಯತ, ಶಾಲಾ ಶಿಕ್ಷಣ ಇಲಾಖೆಯ ಆಶ್ರಯದಲ್ಲಿ ಜರುಗಿದ ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಸ್ಪರ್ಧೆಯಲ್ಲಿ



ಜಿಲ್ಲೆಯ 7 ತಾಲೂಕುಗಳ ಶಾಲೆಯ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಇದರಲ್ಲಿ ಕಿತ್ತೂರ ರಾಣಿ ಚನ್ನಮ್ಮ ವಸತಿ ಶಾಲೆಯ ವಿದ್ಯಾರ್ಥಿಗಳಾದ ಪ್ರತೀಕ್ಷಾ ಭಜಂತ್ರಿ, ನಿರ್ಗುಣ ಕಲ್ಮನಿ, ಅನನ್ಯ ಕಲಾಲ, ಕೌಶಲ್ಯ ಲಮಾಣಿ, ಅಶ್ವಿನಿ ರಾಲದೊಡ್ಡಿ, ಸವಿತಾ ಲಮಾಣಿ ಹಳ್ಳಿ ಸೊಗಡಿನ ಜಾನಪದ ನೃತ್ಯದಲ್ಲಿ ಭಾಗವಹಿಸಿ ಉತ್ತಮವಾಗಿ ನೃತ್ಯ ಪ್ರದರ್ಶನ ಮಾಡಿದ್ದಕ್ಕಾಗಿ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ ಎಂದು ವಸತಿ ಶಾಲೆಯ ಮುಖ್ಯೋಪಾಧ್ಯಾಯರು ತಿಳಿಸಿದ್ದಾರೆ.

# ಕಡಲೆ ಬೆಳೆ ಮೇಯಿಸಿದ ಕುರಿಗಾರರು: ರೈತರಿಂದ ದೂರು

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ರೈತರ ಜಮೀನಿನಲ್ಲಿ ಬೆಳೆದ ಕಡಲೆ ಮತ್ತು ಹುಳ್ಳಿ ಬೆಳೆಯನ್ನು ಕುರಿಗಳು ಮೇಯ್ದು ಹಾಳು ಮಾಡಿದ್ದು, ರೈತರು ಗದಗ ಗ್ರಾಮೀಣ ಪೊಲೀಸ್ ಠಾಣೆಗೆ ದೂರು ಸಲ್ಲಿಸಿದ್ದಾರೆ.

ಇಲ್ಲಿಯ ದೊಡ್ಡರ ಕಟ್ಟೆ ರಸ್ತೆಯ ಸೀಬಾರ ಹಳ್ಳದ ಹತ್ತಿರ ಜಮೀನುಗಳಲ್ಲಿ ಬೆಳೆದಿದ್ದ ಬೆಳೆಯನ್ನು ಕುರಿಗಾರರು ತಮ್ಮ ಕುರಿಗಳನ್ನು ಬಿಟ್ಟು ಮೇಯಿಸಿದ್ದು ಅಪಾರ ಪ್ರಮಾಣದ ಫಸಲು ನಷ್ಟವಾಗಿದೆ. ಗ್ರಾಮದ ಮಲ್ಲಪ್ಪ ಶಿವಪ್ಪ ಬಿನ್ನಾಳ ಅವರ 5 ಎಕರೆ ಕಡಲೆ, 1 ಎಕರೆ ಗೋಧಿ, 3 ಎಕರೆ ಹುಳ್ಳಿ, ನೀಲಪ್ಪ ಹಿರೇಹಾಳ ಅವರ 3 ಎಕರೆ ಕಡಲೆ, ಶಿವಪ್ಪ ಬಿನ್ನಾಳ ಅವರ 3 ಎಕರೆ ಹುಳ್ಳಿ



ಹಾಗೂ ಭೀಮಪ್ಪ ಕರಿ ಅವರ 1 ಎಕರೆ ಕಡಲೆ, 1 ಎಕರೆ ಜೋಳದ ಬೆಳೆ ಹಾಗೂ ಫಕ್ಕೀರಗೌಡ ಗೌಡ್ರ ಅವರ 2 ಎಕರೆ ಕಡಲೆ ಬೆಳೆ ಫಸಲನ್ನು ಕುರಿಗಳು ಇತ್ತೀಚೆಗೆ ರಾತ್ರಿ ಸಮಯದಲ್ಲಿ ಮೇಯ್ದು ಹಾಳು ಮಾಡಿವೆ.

ಆಕ್ರೋಶಗೊಂಡ ರೈತರು ಗದಗ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದು, ನಷ್ಟ ಮಾಡಿದ ಕುರಿ ಮಾಲೀಕರನ್ನು ಪತ್ತೆ ಹಚ್ಚಿ ಅವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕೆಂದು ನೀಲಪ್ಪ ಹಿರೇಹಾಳ, ಮಲ್ಲಪ್ಪ ಬಿನ್ನಾಳ, ಶಿವಪ್ಪ ಬಿನ್ನಾಳ, ಭೀಮಪ್ಪ ಕರಿ, ಶಿವಪ್ಪ ಬಿನ್ನಾಳ, ಚಂದ್ರು ಛಬ್ಬರಭಾವಿ, ಭಾರತೀಯ ಕಿಸಾನ್ ಸಂಘದ ತಾಲೂಕಾಧ್ಯಕ್ಷ ವೆಂಕಟೇಶ ದೊಂಗಡೆ, ಗದಗ ಜಿಲ್ಲಾ ರೈತ ಸಂಘದ ಅಧ್ಯಕ್ಷ ಯಲ್ಲಪ್ಪ ಬಾಬರಿ ಆಗ್ರಹಿಸಿದ್ದಾರೆ.

# ಸಧೃಡ ರಾಷ್ಟ್ರನಿರ್ಮಾಣಕ್ಕೆ ಮತದಾನ ಮುಖ್ಯ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಎಲ್ಲ ಯುವ ಮತದಾರರು ಜಾಗೃತರಾಗಿ ಮತದಾನದ ವೇಳೆ ಕಡ್ಡಾಯವಾಗಿ ಮತದಾನದ ಹಕ್ಕನ್ನು ಚಲಾಯಿಸಬೇಕು. ಒಂದೊಂದು ಮತವೂ ಸಹ ಅತ್ಯಮೂಲ್ಯವಾಗಿರುವದರಿಂದ, ಸದೃಢ ರಾಷ್ಟ್ರನಿರ್ಮಾಣಕ್ಕೆ ನಿಮ್ಮ ಮತದಾನ ಅತೀ ಪ್ರಮುಖವಾಗಿದೆ ಎಂದು ತಹಸೀಲ್ದಾರ ಅನಿಲ ಬಡಿಗೇರ ಹೇಳಿದರು.

ಅವರು ಶನಿವಾರ ಶಿರಹಟ್ಟಿಯ ಎಫ್.ಎಂ. ಡಬಾಲಿ ಪದವಿಪೂರ್ವ ಕಾಲೇಜಿನಲ್ಲಿ 15ನೇ ರಾಷ್ಟ್ರೀಯ ಮತದಾರರ ದಿನಾಚರಣೆಯ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಇಡೀ ಜಗತ್ತಿಗೆ ಮಾದರಿಯಾದ ಪ್ರಜಾಪ್ರಭುತ್ವ ನಮ್ಮದಾಗಿದ್ದು, ಇದನ್ನು




ಇನ್ನಷ್ಟು ಗಟ್ಟಿಗೊಳಿಸುವುದಕ್ಕಾಗಿ 18 ವರ್ಷ ಮೀರಿದ ಎಲ್ಲ ವಿದ್ಯಾರ್ಥಿಗಳು ಕಡ್ಡಾಯವಾಗಿ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ಸೇರ್ಪಡೆಗೊಳಿಸಬೇಕು. ನಿಮ್ಮ ನೆರೆ–ಹೊರಯವರಿಗೂ ಸಹ ಮತದಾನದ ಬಗ್ಗೆ ಜಾಗೃತಿ ಮೂಡಿಸಬೇಕು. ಮತದಾನಕ್ಕೆ ಪ್ರೇರೇಪಿಸುವ ಕೆಲಸವಾಗಬೇಕು. ಮತದಾನದ ಪ್ರಮಾಣ ಹೆಚ್ಚಿಸಲು ಇಂತಹ ಜಾಗೃತಿ ಕಾರ್ಯಕ್ರಮಗಳನ್ನು ಮಾಡಲಾಗುತ್ತಿದ್ದು, ಇದನ್ನು ಸದುಪಯೋಗಪಡಿಸಿಕೊಂಡು ಪ್ರಜಾಪ್ರಭುತ್ವದ ಶಕ್ತಿ ಇಮ್ಮಡಿಗೊಳಿಸುವುದಕ್ಕೆ ಎಲ್ಲ ಯುವಕರು ಮುಂದಾಗಬೇಕೆಂದು ಹೇಳಿದರು.

ತಾ.ಪಂ ಇಓ ಎಸ್.ಎಸ್. ಕಲ್ಮನಿ, ಪಿಎಸ್‌ಐ ಚನ್ನಯ್ಯ ದೇವೂರ, ಮುಖ್ಯಾಧಿಕಾರಿ ಸಿದ್ದರಾಯ ಕಟ್ಟಿಮನಿ, ಪ್ರಾಚಾರ್ಯ ಎಂ.ಸಿ. ಭಜಂತ್ರಿ, ಉಪನ್ಯಾಸಕಿ ಸುಧಾ ಹುಚ್ಚಣ್ಣವರ, ಶಿವನಗೌಡ ಪಾಟೀಲ, ಮಹೇಶ ದಾನಪ್ಪಗೌಡ್ರ ಮುಂತಾದವರು ಉಪಸ್ಥಿತರಿದ್ದರು.


### ಬೀದಿ ಬದಿ ವ್ಯಾಪಾರಸ್ಥರಲ್ಲಿ ಒಡಕು ಮೂಡಿಸುತ್ತಿರುವ ಪುರಸಭೆ

# ಆಡಳಿತ ವರ್ಗದ ನೀತಿಗೆ ವಿರೋಧ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪುರಸಭೆಯ ಒಡೆದಾಳುವ ನೀತಿಯನ್ನು ಖಂಡಿಸಿ ನಗರದಲ್ಲಿ ಶನಿವಾರ ಬೀದಿ ಬದಿ ವ್ಯಾಪಾರಸ್ಥರು ದುರ್ಗಾ ಸರ್ಕಲ್‌ನಲ್ಲಿರುವ ಈಶ್ವರ ದೇವಸ್ಥಾನದಲ್ಲಿ ಸಭೆ ನಡೆಸಿದರು.

ಈ ಸಂದರ್ಭದಲ್ಲಿ ಪ್ರಧಾನ ಕಾರ್ಯದರ್ಶಿ ಪೀರು ರಾಠೋಡ ಮಾತನಾಡಿ, ನಗರದಲ್ಲಿ ಬೀದಿ ಬದಿ ವ್ಯಾಪಾರಸ್ಥರಿಗೆ ತಳ್ಳುವ ಗಾಡಿ ಹಾಗೂ ಗುರುತಿನ ಚೀಟಿಯನ್ನು ವಿತರಣೆ ಕಾರ್ಯಕ್ರಮವನ್ನು ಬೀದಿ ಬದಿ ವ್ಯಾಪಾರಸ್ಥರಿಗೆ ತಿಳಸದೆ ಹಮ್ಮಿಕೊಂಡಿರುವುದು ಬೀದಿ ಬದಿ ವ್ಯಾಪಾರಸ್ಥರ ಕಾಯ್ದೆಯ ಉಲ್ಲಂಘನೆಯಾಗಿದೆ. ಬೀದಿ ಬದಿ ವ್ಯಾಪಾರಸ್ಥರು ಕಳೆದ 3 ತಿಂಗಳಿಂದ ಅವರ ಹಕ್ಕುಗಳಿಗಾಗಿ ಹೋರಾಟ ಮಾಡುತ್ತಿದ್ದು, ಹೋರಾಟಕ್ಕೆ ಪುರಸಭೆ ಮುಖ್ಯಾಧಿಕಾರಿಗಳು, ತಹಸೀಲ್ದಾರರು ಹಾಗೂ ಪೊಲೀಸ್ ಅಧಿಕಾರಿಗಳು ಸೇರಿ ಹೋರಾಟಗಾರರ ಜೊತೆಗೆ ಜಂಟಿ ಸಭೆ ಮಾಡಿ 31/01/2025ರಂದು ಬೇಡಿಕೆಗಳನ್ನು ಈಡೇರಿ



ಸುತ್ತೇವೆಂದು ಲಿಖಿತ ಭರವಸೆ ನೀಡಿ ಹೋರಾಟ ಹಿಂಪಡೆಯಲು ಹೇಳಿದ್ದರು. ಆದರೆ ಪುರಸಭೆ ಆಡಳಿತ ಹಾಗೂ ಸ್ಥಳೀಯ ಈ ಕ್ಷೇತ್ರದ ಶಾಸಕರು ಕೂಡಿಕೊಂಡು ಕೆಲವೇ ಕೆಲವು ಬೀದಿ ಬದಿ ವ್ಯಾಪಾರಸ್ಥರಿಗೆ ತಳ್ಳುಗಾಡಿ ಹಾಗೂ ಗುರುತಿನ ಚೀಟಿ ವಿತರಣೆ ಮಾಡುವ ಮೂಲಕ ಬೀದಿ ಬದಿ ವ್ಯಾಪಾರಸ್ಥರಲ್ಲಿ ಒಡಕು ಮೂಡಿಸುತ್ತಿದ್ದಾರೆ.

ತಾಲೂಕು ಅಧ್ಯಕ್ಷ ಶಾಮೀದ ಅಲಿ ದಿಂಡವಾಡ, ಕೃಷಿ ಕೂಲಿಕಾರರ ಸಂಘದ ತಾಲೂಕಾಧ್ಯಕ್ಷ ಬಾಲು ರಾಠೋಡ ಮಾತನಾಡಿದರು. ಈ ಸಂದರ್ಭದಲ್ಲಿ ಬೀದಿ ಬದಿ ವ್ಯಾಪಾರಸ್ಥರ ಸಂಘದ ಅಮರೇಶ ಚವ್ಹಾಣ, ಮುತ್ತು ರಾಠೋಡ, ಮಂಜುಳಾ ಪವಾರ, ಚೌಡಮ್ಮ ಯಲ್ವೊ, ರೇಣವ್ವ ರಾಠೋಡ, ಅನ್ವರ್ ಹೀರೆಕೊಪ್ಪ, ವಿಷ್ಣು ಚಂದನಕರ್, ಕಳಕೇಶ ಮಾಳೋತ್ತರ, ದಾನಪ್ಪ ರಾಠೋಡ, ಮುತ್ತಣ್ಣ ರಾಠೋಡ, ಬಾಷಾಸಾಬ್ ಮಾಲಾದ್ದಾರ್, ಶಂಕರಪ್ಪ ಪಾತರೊಟ್ಟಿ, ಮಾರುತಿ ಗೊಂದೆ, ರೇಣವ್ವ ಕಲಾಲ, ಬಸಮ್ಮ ಕಾಟಾಪುರ, ಹಸೀನಾ ಬೇಗಂ ಬಳ್ಳೊಳ್ಳಿ, ನಾಗರಾಜ ದಿವಾನದ್, ಗಂಗವ್ವ ಸವನೂರು, ಕಾಳವ್ವ ಚವ್ಹಾಣ, ಪಾರವ್ವ ಪಮ್ಮಾರ್, ಶಾರವ್ವ ರಾಠೋಡ, ಜ್ಯೋತಿ ಜಾಟೋತ್ತರ, ಲಕ್ಷ್ಮವ್ವ ಪಮ್ಮಾರ್, ಶಾರದಾ ಮಾಳೋತ್ತರ, ಸುನೀಲ್ ಕುಂಬಾರ್, ಸುರೇಶ ಅಕ್ಕಸಾಲಿಗ, ಪಿರೋಜಾ ಮುಂತಾದವರು ಹಾಜರಿದ್ದರು.

# ಮತದಾನ ಜಾಗೃತಿ ಕಾರ್ಯಕ್ರಮ




■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಜಿಲ್ಲಾ ಪಂಚಾಯತ, ತಾಲೂಕು ಪಂಚಾಯತ, ಲಕ್ಕುಂಡಿ ಗ್ರಾ.ಪಂ ಸ್ವೀಪ್ ಸಮಿತಿ ಆಶ್ರಯದಲ್ಲಿ ಮತದಾನ ಜಾಗೃತಿ ಜಾಥಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಈ ಸಂದರ್ಭದಲ್ಲಿ ಪಂಚಾಯತ ಅಭಿವೃಧಿ ಅಧಿಕಾರಿ ಅಮೀರ ಅಮಜಾನಸಾಬ ನಾಯಕ ಮಾತನಾಡಿ, ನಮ್ಮ ದೇಶವು ಪ್ರಜಾಪ್ರಭುತ್ವ ರಾಷ್ಟ್ರವಾಗಿದ್ದು, ಪ್ರಜಾಪ್ರಭುತ್ವವನ್ನು ಗಟ್ಟಿಗೊಳಿಸುವ ನಿಟ್ಟಿನಲ್ಲಿ 18 ವರ್ಷ ದಾಟಿದ ಪ್ರತಿಯೊಬ್ಬ ನಾಗರಿಕರು ಮತ ಚಲಾಯಿಸುವ ಹಕ್ಕನ್ನು ಪಡೆದಿರುತ್ತಾರೆ. ಈ ಹಕ್ಕನ್ನು ಚಲಾಯಿಸಿ ತಮ್ಮ ಪ್ರತಿನಿಧಿಗಳನ್ನು ಆಯ್ಕೆ ಮಾಡುವ ಹಕ್ಕನ್ನು ನಾವೆಲ್ಲರೂ ಪಡೆದಿರುತ್ತೇವೆ. ಆದ್ದರಿಂದ ಮತದಾನದ ಹಕ್ಕನ್ನು ಪಡೆದಿರುವವರು ಗುರುತಿನ ಚೀಟಿಯನ್ನು ಸರಕಾರದಿಂದ ನೇಮಿಸಿದ ಬಿ.ಎಲ್.ಒಗಳಿಂದ ಪಡೆದುಕೊಳ್ಳಬೇಕು ಎಂದು ತಿಳಿಸಿದರಲ್ಲದೆ, ಮತದ ಮೌಲ್ಯದ ಕುರಿತು ವಿವರಿಸಿದರು.

ಇದೇ ಸಂದರ್ಭದಲ್ಲಿ ಪ್ರತಿಜ್ಞಾ ವಿಧಿ ಬೋಧಿಸಲಾಯಿತು. ಗ್ರಾ.ಪಂ ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಸದಸ್ಯರಾದ ಅನಸಮ್ಮ ಅಂಬಕ್ಕಿ, ಕುಬೇರಪ್ಪ ಬೆಂತೂರು, ಅಮೀನಾ ಹುಬ್ಬಳ್ಳಿ, ರಮೇಶ ಭಾವಿ, ವಿರುಪಾಕ್ಷಿ ಬೆಟಗೇರಿ, ಹನುಮಂತಪ್ಪ ಬಂಗಾರಿ, ಮಹಿಳಾ ಸಂಜೀವಿನಿ ಒಕ್ಕೂಟದ ಚಂದ್ರಕಲಾ ಮಾಡಲಗೇರಿ ಸೇರಿದಂತೆ ಗ್ರಾ.ಪಂ ಸಿಬ್ಬಂದಿಗಳು ಹಾಜರಿದ್ದರು.

**ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸಭೆಯಲ್ಲಿ ಸಚಿವ ಎಚ್.ಕೆ.ಪಾಟೀಲ**

# ಗ್ಯಾರಂಟಿಯಿಂದ ಬಡವರ ಬದುಕು ಬಂಗಾರವಾಗಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಪಂಚ ಗ್ಯಾರಂಟಿ ಯೋಜನೆಗಳು ಬಡಜನರ ಬದುಕಿನಲ್ಲಿ ಬದಲಾವಣೆ ತರುವ ಯೋಜನೆಗಳಾಗಿವೆ. ಗ್ಯಾರಂಟಿ ಸಮಿತಿ ಸದಸ್ಯರು ಅಧಿಕಾರಿಗಳು ಸಮರ್ಪಕ ಅನುಷ್ಠಾನ ಮಾಡುವ ಮೂಲಕ ಬಡವರ ಬದುಕು ಬಂಗಾರವಾಗಿಸಬೇಕೆಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಸೂಚಿಸಿದರು.



ಗದಗ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಕೋರ್ಟ್ ಹಾಲ್‌ನಲ್ಲಿ ಸೋಮವಾರ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಕುರಿತು ಪ್ರಗತಿ ಪರಿಶೀಲನಾ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು.

> ಗೃಹಲಕ್ಷ್ಮೀ ಯೋಜನೆಯಿಂದ ಬಂದ ಹಣದಲ್ಲಿ ಜಿಲ್ಲೆಯ ಹಲವಾರು ಫಲಾನುಭವಿಗಳು ಬದುಕು ಕಟ್ಟಿಕೊಂಡಿದ್ದಾರೆ. ಸರ್ಕಾರದ ಸಹಾಯಧನದಡಿ ಸ್ವಉದ್ಯೋಗ ಕೈಗೊಳ್ಳಲು ಬಳಸಿಕೊಂಡಿರುವುದು ಹೆಮ್ಮೆ ತಂದಿದೆ. ಸಮಿತಿ ಸದಸ್ಯರು ಗ್ಯಾರಂಟಿ ಯೋಜನೆಗಳನ್ನು ಅರ್ಹರಿರುವವರಿಗೆ ಕೊಡಿಸಬೇಕು. ಇದರಿಂದ ಜನರ ಪ್ರೀತಿ, ವಿಶ್ವಾಸ, ಗೌರವ ಇಮ್ಮಡಿಗೊಳ್ಳುವ ಮೂಲಕ ನಿಮಗೆ ನಿರಂತರವಾಗಿ ಸಹಕಾರ ನೀಡುತ್ತಾರೆ ಎಂದು ಸಚಿವ ಎಚ್.ಕೆ. ಪಾಟೀಲ ತಿಳಿಸಿದರು.

ಕರ್ನಾಟಕ ರಾಜ್ಯದ 1 ಕೋಟಿ ಕುಟುಂಬಗಳನ್ನು ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನದಿಂದ ಬಡತನ ರೇಖೆಗಿಂತ ಮೇಲೆತ್ತಲಾಗಿದೆ. ಪ್ರತಿ ಕುಟುಂಬಕ್ಕೆ ಪಂಚ ಗ್ಯಾರಂಟಿಗಳಿಂದಾಗಿ ವಾರ್ಷಿಕ 60,000 ರೂ. ದೊರೆಯುತ್ತದೆ. ಒಟ್ಟಾರೆ ರಾಜ್ಯದಲ್ಲಿ ಗ್ಯಾರಂಟಿ ಅನುಷ್ಠಾನಕ್ಕೆ 58 ಸಾವಿರ ಕೋಟಿ ರೂ ಮೀಸಲಿಡುವ ಮೂಲಕ ಬಡವರ ಆರ್ಥಿಕ ಸಬಲೀಕರಣಕ್ಕೆ ಸರ್ಕಾರ ದೃಢ ನಿರ್ಧಾರ ಕೈಗೊಂಡಿದೆ ಎಂದರು.

ಸರ್ಕಾರ ಹಣ ನೇರವಾಗಿ ಫಲಾನುಭವಿಗಳಿಗೆ ಎಲ್ಲಿಯೂ ಸೋರಿಕೆ ಆಗದಂತೆ ತಲುಪಿದೆ. ಭ್ರಷ್ಟಾಚಾರ ಮುಕ್ತ ಆಡಳಿತ ನೀಡುವಲ್ಲಿ ಗ್ಯಾರಂಟಿ ಯೋಜನೆಗಳು ಸಂಪೂರ್ಣ ಯಶಸ್ವಿಯಾಗಿವೆ. ನೇರ ನಗದು ವರ್ಗಾವಣೆಯು ಮೂಲಕ ಪಾರದರ್ಶಕ ಆಡಳಿತ ಒದಗಿಸಿದೆ ಎಂದು ಹೇಳಿದರು.

ಪಂಚ ಗ್ಯಾರಂಟಿ ಯೋಜನೆಗಳು ನಿರಂತರವಾಗಿ ನಡೆಯುತ್ತವೆ. ಯಾವುದೂ ನಿಲ್ಲುವುದಿಲ್ಲ. ಕೆಲವರು ರಾಜಕೀಯ ಅಪಪ್ರಚಾರ ನಡೆಸಿದ್ದು, ಇದಕ್ಕೆ ಯಾರೊಬ್ಬರೂ ಕಿವಿಗೊಡಬೇಡಿ ಎಂದು ಡಾ. ಎಚ್.ಕೆ. ಪಾಟೀಲ ತಿಳಿಸಿದರು.

ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ ಎಸ್ ಮಾತನಾಡಿ, ಗ್ಯಾರಂಟಿ ಯೋಜನೆಯ ಸೌಲಭ್ಯ ತಲುಪಿಸುವಾಗ ಕೆಲವು ತಾಂತ್ರಿಕ ಸಮಸ್ಯೆಗಳು ಎದುರಾದರೆ ಮೇಲಾಧಿಕಾರಿಗಳ ಗಮನಕ್ಕೆ ತಂದು ಸೌಲಭ್ಯ ವಿತರಿಸಲು ಕ್ರಮ ವಹಿಸಬೇಕು ಎಂದರು.

ಗೃಹಲಕ್ಷ್ಮೀ ಯೋಜನೆಯಡಿ ಅಕ್ಟೋಬರ್ 2024ರವರೆಗೆ ಜಿಲ್ಲೆಯಲ್ಲಿ 248525 ನೊಂದಣಿಯಾದ ಅರ್ಜಿಗಳ ಪೈಕಿ 244398 ಅರ್ಜಿಗಳಿಗೆ ಮಂಜೂರಾತಿ ದೊರೆತಿದೆ. ಜಿಲ್ಲೆಯಲ್ಲಿ ವಾಕರಸಾ ಸಂಸ್ಥೆಯಿಂದ ಶಕ್ತಿ ಯೋಜನೆಯಡಿ ದಿ: 11-6-2023ರಿಂದ 20-1-2025ರವರೆಗೆ 83051736 ಫಲಾನುಭವಿಗಳು ಯೋಜನೆಯ ಲಾಭ ಪಡೆದಿದ್ದು,ಸಂಸ್ಥೆಗೆ 259.25 ಕೋಟಿ ರೂ. ಆದಾಯವಾಗಿದೆ.

ಗೃಹಜ್ಯೋತಿ ಯೋಜನೆಗೆ ಗದಗ ಜಿಲ್ಲೆಯಲ್ಲಿ ಆಗಸ್ಟ್ 2023ರಿಂದ ಡಿಸೆಂಬರ್ 2024ರವರೆಗೆ 13843.37 ಲಕ್ಷ ರೂ. ಬಿಡುಗಡೆಯಾಗಿದ್ದು, 75335 ಸ್ಥಾವರಗಳು ಅರ್ಹವಿದ್ದು ಡಿಸೆಂಬರ್ 2024ರವರೆಗೆ 272590 ಸ್ಥಾವರಗಳ ನೊಂದಣಿಯಾಗಿದೆ.

> ತಾಲೂಕುಗಳಲ್ಲಿ ಗ್ಯಾರಂಟಿ ಯೋಜನೆಗಳ ಸೌಲಭ್ಯ ವಿತರಣೆಗೆ ಸಮಸ್ಯೆಗಳೇನಾದರೂ ಇದ್ದಲ್ಲಿ ತಾಲೂಕಾಧ್ಯಕ್ಷರ ಗಮನಕ್ಕೆ ತರಬೇಕು. ಅನುಷ್ಠಾನ ಅಧಿಕಾರಿಗಳು ವಿಶೇಷ ಮುತುವರ್ಜಿ ವಹಿಸಿ ಕೆಲಸ ಮಾಡಬೇಕು. ತಾಲೂಕು ಮಟ್ಟದಲ್ಲಿಯೂ ಸಹ ಸಭೆ ನಿಯಮಿತವಾಗಿ ನಡೆಸಬೇಕು ಹಾಗೂ ಸಂಬಂಧಿತ ಇಲಾಖೆಯ ಅಧಿಕಾರಿಗಳು ತಾಲೂಕು ಮಟ್ಟದಲ್ಲಿಯೂ ಕಡ್ಡಾಯವಾಗಿ ಹಾಜರಾಗಬೇಕು.
>
> **– ಬಿ.ಬಿ. ಅಸೂಟಿ.**
>
> ಅಧ್ಯಕ್ಷರು, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರ.

ಜಿಲ್ಲೆಯಲ್ಲಿ ಯುವನಿಧಿ ಯೋಜನೆಯಿಂದ 31-12-2024ರವರೆಗೆ ಒಟ್ಟು ಸ್ವೀಕೃತಗೊಂಡ 3811 ಅರ್ಜಿಗಳ ಪೈಕಿ ಡಿಸೆಂಬರ್ 2024ರವರೆಗೆ 2472 ಅರ್ಜಿಗಳಿಗೆ ಅನುದಾನ ಮಂಜೂರಾಗಿದ್ದು, ಬಾಕಿ 1339 ಅರ್ಜಿಗಳ ಮಂಜೂರಾತಿ ಹಂತ ಹಂತವಾಗಿ ಆಗುತ್ತವೆ. ಯುವನಿಧಿ ಫಲಾನುಭವಿಗಳಿಗೆ ಡಿಸೆಂಬರ್ 2024ರಲ್ಲಿ 73,47,000 ರೂ. ಡಿ.ಬಿ.ಟಿ ಮೂಲಕ ಹಣ ವರ್ಗಾಯಿಸಲಾಗಿದೆ. ಅನ್ನಭಾಗ್ಯ ಯೋಜನೆಯಡಿ ಸೆಪ್ಟೆಂಬರ್ 2024ರ ಮಾಹೆಯಲ್ಲಿ ಜಿಲ್ಲೆಯಲ್ಲಿ 226152 ಪಡಿತರ ಕಾರ್ಡುದಾರರಿಗೆ ಡಿ.ಬಿ.ಟಿ. ಮೂಲಕ 123580820 ರೂ. ಹಣ ಸಂದಾಯಿಸಲಾಗಿದೆ ಎಂದು ಗ್ಯಾರಂಟಿ ಯೋಜನೆಯ ಸಂಬಂಧಿತ ಅಧಿಕಾರಿಗಳು ಸಭೆಗೆ ಮಾಹಿತಿ ಒದಗಿಸಿದರು.

ಸಭೆಯಲ್ಲಿ ಗದಗ-ಬೆಟಗೇರಿ ನಗರಸಭೆ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಪ್ರಾಧಿಕಾರದ ಉಪಾಧ್ಯಕ್ಷರುಗಳಾದ ನೀಲಮ್ಮ ಬೋಳನವರ, ಹೇಮಂತಗೌಡ ಪಾಟೀಲ, ಶರಣಪ್ಪ ಬೆಟಗೇರಿ, ಪಿ.ಬಿ. ಅಗಳವಾಡಿ, ದೀಪಕ ಲಮಾಣಿ, ಸದಸ್ಯರಾದ ಅಶೋಕ ಮಂದಾಲಿ, ರೂಪಾ ಅಂಗಡಿ, ಶಿವನಗೌಡ ಪಾಟೀಲ, ಶರೀಫ ಬಿಳೆಎಲಿ, ಬಸವರಾಜ ಬೆಳದಡಿ, ವಿವೇಕ ಯಾವಗಲ್, ದೇವಪ್ಪ ಮೋರನಾಳ, ಪುಲಕೇಶಗೌಡ ಪಾಟೀಲ, ವಿರೂಪಾಕ್ಷ ಯಾರಸಿ, ಈಶಣ್ಣ ಹುಣಸೀಕಟ್ಟಿ, ರಾಜೀವ ಕುಂಬಿ, ಗೀತಾ ಬೀರಣ್ಣವರ, ವೀರಯ್ಯ ಮಠಪತಿ, ಫಕ್ರುಸಾಬ ಚಿಕ್ಕಮಣ್ಣೂರ, ಆರ್.ಆರ್. ಗಡ್ಡದ್ದೇವರಮಠ ಪಾಲ್ಗೊಂಡು ಅನುಷ್ಠಾನ ಕುರಿತಂತೆ ಇರುವ ತಾಂತ್ರಿಕ ತೊಂದರೆಗಳ ಕುರಿತು ಚರ್ಚಿಸಿದರು.

## ಸರ್ಕಾರಿ ಉರ್ದು ಶಾಲೆಯಲ್ಲಿ ಗಣರಾಜ್ಯೋತ್ಸವ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಸೆಟ್ಲಮೆಂಟ ಸರಕಾರಿ ಉರ್ದು ಕಿರಿಯ ಗಂಡು ಮಕ್ಕಳ ಪ್ರಾಥಮಿಕ ಶಾಲೆ ನಂ. 3ರಲ್ಲಿ ಗಣರಾಜ್ಯೋತ್ಸವ ಧ್ವಜಾರೋಹಣ ನೆರವೇರಿತು. ಜಮಾತ್ ಚೇರಮನ್ ಇಮಾಮಸಾಬ ಹುಲ್ಲೂರ ಮಾತನಾಡಿ, ಎಲ್ಲರೂ ಶಿಕ್ಷಣ ಹೊಂದಬೇಕು ಎಂದರು.



ಅಲೆಮಾರಿ ವಿಮುಕ್ತ ಬುಡಕಟ್ಟು ಚಪ್ಪರಬಂದ ಸಮಾಜ ಸಂಘದ ಬಸೀರ ಸಂಕನಾಳ ಮಾತನಾಡುತ್ತಾ, ಈ ಶಾಲೆಯಲ್ಲಿ ಓದುತ್ತಿರುವ ಮಕ್ಕಳು ಶಾಲಾ ಸಿಬ್ಬಂದಿಯವರ ಪರಿಶ್ರಮದ ಫಲವಾಗಿ ಇಂದು ಇಂಗ್ಲಿಷ್ ಮಾತನಾಡುವಂತಾಗಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಇದೇ ಸಂದರ್ಭದಲ್ಲಿ 2024-25ನೇ ಸಾಲಿನ ಆದರ್ಶ ಶಿಕ್ಷಕ ಪ್ರಶಸ್ತಿ ಪಡೆದ ಶಾಲೆಯ ಮುಖ್ಯೋಪಾಧ್ಯಾಯೆ ಸಲ್ಮಾ ಝು. ಬೆಳಗಾಂವಾಲೆ ಇವರನ್ನು ಸಮಾಜದ ಹಿರಿಯರ ಸಮ್ಮುಖದಲ್ಲಿ ಸನ್ಮಾನಿಸಲಾಯಿತು.

ಸಮಾಜದ ಹಿರಿಯರಾದ ಮೋತಿಲಾಲ ಸಿಂದಗಿ, ಹುಸೇನಸಾಬ ಚಪ್ಪರಬಂದ, ಹಾಜಿಮಲಂಗ್ ನಂದಿಹಾಳ, ಬಸೀರ ಸಂಕನಾಳ, ಇಮಾಮಸಾಬ ಮುಜಾವರ, ನಬಿರಸೂಲ್ ಕೊಪ್ಪ, ಇಮಾಮಸಾಬ ವಡ್ಡೊಡಗಿ ಮುಂತಾದವರು ಉಪಸ್ಥಿತರಿದ್ದರು.

## ತಿಮ್ಮಾಪುರದಲ್ಲಿ ಗಣರಾಜ್ಯೋತ್ಸವ ಆಚರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿಯ ಸಮಿಪದ ತಿಮ್ಮಾಪೂರ ಗ್ರಾಮದಲ್ಲಿ 76ನೇ ಗಣರಾಜ್ಯೋತ್ಸವ ಹಾಗೂ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನ ಬಲಿದಾನ ದಿವಸವನ್ನು ವಿವಿಧ ಸಂಘ-ಸಂಸ್ಥೆಗಳ ವತಿಯಿಂದ ಆಚರಿಸಲಾಯಿತು.



ಸಂಗೊಳ್ಳಿ ರಾಯಣ್ಣನ ಕಂಚಿನ ಪುತ್ಥಳಿಯೆದುರು ಸೈನಿಕ ಮಾರುತಿ ಇದ್ಲಿ ಧ್ವಜಾರೋಹಣವನ್ನು ನೆರವೇರಿಸಿ ಮಾತನಾಡಿ, ಭಾರತದ ಸ್ವಾತಂತ್ರ್ಯ ಹೋರಾಟಕ್ಕೆ ಮೊದಲ ಕಿಡಿ ಹೊತ್ತಿಸಿದ್ದು ಸಂಗೊಳ್ಳಿ ರಾಯಣ್ಣ. ಅವರ ಧೈರ್ಯ, ಶೌರ್ಯ, ಪರಾಕ್ರಮಗಳು ಬ್ರಿಟಿಷರ ನಿದ್ದೆಗೆಡಿಸಿದ್ದವು ಎಂದರು.

ಕಾರ್ಯಕ್ರಮದಲ್ಲಿ ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ, ಯಲ್ಲಪ್ಪ ಇದ್ಲಿ, ಯಲ್ಲಪ್ಪ ಹಾಗಲದ, ನಾಗರಾಜ ಮುಸಿಗೇರಿ, ರವಿ ಗಂಗರಾತ್ರಿ, ಅಜಿಪ್ಪ ಜೋಗಿನ, ಬಸವರಾಜ ದೇವರವರ, ಸಿದ್ದಪ್ಪ ಹಾಗಲದ, ಕುಬೇರಗೌಡ ಪಾಟೀಲ, ಮಲ್ಲಪ್ಪ ಮಾಳಗುಂಡರ, ಗಿರೀಶ ಗುಡ್ಲಾನೂರ, ರಾಮಣ್ಣ ಖಂಡ್ರಿ, ರಾಮಣ್ಣ ಕುರಡಗಿ, ರಾಜು ಚವ್ಹಾಣ, ಈರಣ್ಣ ಕಮತರ, ಜೆ.ಜೆ. ಹೀರೆಹಾಳ, ಮಂಜುನಾಥ ಬಸರಿಕಟ್ಟಿ ಮುಂತಾದವರಿದ್ದರು.

## ನಗರಸಭೆಯಲ್ಲಿ 76ನೇ ಗಣರಾಜ್ಯೋತ್ಸವ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರ ಸಭೆಯ ಆವರಣದಲ್ಲಿ 76ನೇ ಗಣರಾಜ್ಯೋತ್ಸವ ಧ್ವಜಾರೋಹಣವನ್ನು ನಗರಸಭೆ ಪೌರಾಯುಕ್ತರಾದ ಮಹೇಶ ಪೋತದಾರ ನೆರವೇರಿಸಿದರು.



ಈ ಸಂದರ್ಭದಲ್ಲಿ ನಗರಸಭೆ ಸಿಬ್ಬಂದಿ ವರ್ಗದವರಾದ ಪರಶುರಾಮ ಶೇರಖಾನೆ, ಹೆಚ್.ಎ. ಬಂಡಿವಡ್ಡರ, ಎ.ಎನ್. ಪುಣೇಕರ, ರಮೇಶ ನಾಗಲೀಕರ, ಎಸ್.ಎನ್. ದಳವಾಯಿ, ಬಿ.ಬಿ. ಕೋಳೂರ, ಮಳ್ಳಿ, ಎಂ.ಎಮ್. ಮಕಾನದಾರ, ಎನ್.ಕೆ. ಬಣಕಾರ, ವಿ.ವ್ಹಿ. ರಾಮಗಿರಿ, ಡಿ.ಎಚ್. ಸೀತಿಮನಿ, ಆರ್.ಎಂ. ಪಾಟೀಲ, ಅಕ್ಕಮ್ಮ ಮಾಢಳ್ಳಿ, ಮಂಜುಳಾ ಗುಡಿಸಾಗರ, ಮಂಜುಳಾ ಉಗರಗೋಳ, ಎಸ್.ಎಮ್. ಗುಡಿ, ಎಸ್.ವ್ಹಿ. ತೋಟಗಿ, ಬಿ.ಜಿ. ಹಿರೇಮಠ, ರಾಜು ಕಾಗನೂರಮಠ, ವಿಶ್ವನಾಥ ಸೇರದಿಂತೆ ನಗರಸಭೆ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಕಾನೂನು ಉಲ್ಲಂಘನೆಗೆ ಅಸಮಾಧಾನ

▶▶ ಮೊದಲನೇ ಪುಟದಿಂದ

ಈ ವೇಳೆ ಮಾತನಾಡಿದ ನಗರಸಭೆ ಸದಸ್ಯ ರಾಘವೇಂದ್ರ ಯಳವತ್ತಿ, ಮೊದಲ ಅವಧಿಯ ಅಧ್ಯಕ್ಷ ಸ್ಥಾನ ಮುಗಿದು ಆರು ತಿಂಗಳು ಗತಿಸಿವೆ. ಆದರೆ, ಉಪವಿಭಾಗಾಧಿಕಾರಿಗಳು ಸರ್ಕಾರದ ಕೈಗೊಂಬೆಯಾಗಿ ಕೆಲಸ ಮಾಡುತ್ತಾ ಕಾಲಹರಣ ಮಾಡುತ್ತಿದ್ದಾರೆ. ನಗರಸಭೆ ಸದಸ್ಯರು ನಾಮಕಾವಸ್ತೆಗೆ ಸದಸ್ಯರಾಗಿದ್ದಾರೆ. ಈ ಭಾಗದ ಶಾಸಕರು ಕೇವಲ ಗ್ರಾಮಿಣ ಭಾಗದ ಶಾಸಕರಂತೆ ವರ್ತಿಸುತ್ತಿದ್ದಾರೆ ಎಂದು ಆರೋಪಿಸಿದರು. ಜನವರಿ 10, 2025ರಂದು ಕೋರ್ಟ್ ಆದೇಶ ಹಾಗೂ ಡಿಸಿ ಮನವಿಯನ್ನು ಎಸಿ ಅವರಿಗೆ ನೀಡಿದ್ದೇವೆ. ಆದರೂ ಎಸಿ ಚುನಾವಣೆ ನಡೆಸದೇ ರಾಜಕಾರಣಿಯಾಗಿ ಕೆಲಸ ಮಾಡುತ್ತಿದ್ದಾರೆ. ನಿಯಮದಂತೆ ಅತೀ ಜರೂರಾಗಿ ಚುನಾವಣೆ ನಡೆಸಬೇಕು ಎಂದಿದ್ದರೂ ವಿನಾಕಾರಣ ವಿಳಂಬ ನೀತಿ ಅನುಸರಿಸುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ನಗರಸಭೆ ಮಾಜಿ ಅಧ್ಯಕ್ಷೆ ಉಷಾ ದಾಸರ, ಸದಸ್ಯರಾದ ಅನಿಲ ಅಬ್ಬಿಗೇರಿ, ಪ್ರಕಾಶ್ ಅಂಗಡಿ, ಚಂದ್ರಶೇಖರ ತಡಸದ, ವಿನಾಯಕ ಮಾನ್ವಿ, ವಿಜಯಲಕ್ಷ್ಮೀ ದಿಂಡೂರ್, ಶ್ವೇತಾ ದಂಡಿನ್, ಲಕ್ಷ್ಮೀ ಕಾಕಿ, ವಿದ್ಯಾವತಿ ಗಡಗಿ, ಮುತ್ತಣ್ಣ ಮುಸಿಗೇರಿ, ಮುಖಂಡರಾದ ಎಂ.ಎಸ್. ಕರಿಗೌಡ್ರ, ಜಿಲ್ಲಾಧ್ಯಕ್ಷ ರಾಜು ಕುರಡಗಿ, ಮಹೇಶ್ ದಾಸರ, ಸುಧೀರ್ ಕಾಟಿಗರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಕಾಂಗ್ರೆಸ್ ಪಕ್ಷದ ಮುಖ್ಯ ಉದ್ದೇಶವೇ ಅಭಿವೃದ್ಧಿ

▶▶ ಮೊದಲನೇ ಪುಟದಿಂದ

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ತಾಲೂಕಿನಲ್ಲಿ ಬಹಳಷ್ಟು ಅಭಿವೃದ್ಧಿ ಕೆಲಸಗಳಿಗೆ ಅನುದಾನ ನೀಡಿದ್ದು, ಗ್ರಾಮಾಂತರ ಪ್ರದೇಶಗಳಲ್ಲೂ ಅಭಿವೃದ್ಧಿ ಕೆಲಸಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರಲ್ಲದೆ, ಡಂಬಳ ಗ್ರಾಮದ ಆಸ್ಪತ್ರೆಯನ್ನು ಶೀಘ್ರದಲ್ಲಿಯೇ 30 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆಯನ್ನಾಗಿ ಮಾಡಲಾಗುವುದು ಎಂದು ಹೇಳಿದರು. ಗ್ರಾಮಗಳಲ್ಲಿ ರೈತರ, ಮಹಿಳೆಯರ, ಕೂಲಿಕಾರ್ಮಿಕರ ಸಮಸ್ಯೆಗಳನ್ನು ಶಾಸಕರು ಆಲಿಸಿ ಕೆಲ ಸಮಸ್ಯೆಗಳಿಗೆ ಸ್ಥಳದಲ್ಲಿಯೇ ಪರಿಹಾರ ಸೂಚಿಸಿದರು. ಕಾರ್ಯಕ್ರಮದಲ್ಲಿ ವಿ.ಆರ್. ಗುಡಿಸಾಗರ, ಡಿ.ಡಿ. ಮೋರನಾಳ, ಗುರಣ್ಣ ಕುರ್ತಕೋಟಿ, ಚೆನ್ನಪ್ಪ ಹಳ್ಳಿ, ಮಂಜುನಾಥ ಕಿನ್ನಾಳ, ಮಾಂತೇಶ ಮುಗಳಿ, ಗುರಣ್ಣ ಸಂಶಿ, ರಾಘು ಕುರಿಯವರ, ಗ್ರಾ.ಪಂ ಅಧ್ಯಕ್ಷೆ ಶಿವಲೀಲಾ ಬಂಡಿಹಾಳ, ಜಿ.ಎಸ್. ಕೊರ್ಲಹಳ್ಳಿ, ವಿ.ಎಸ್. ಯರಾಶಿ, ಬಸುರಡ್ಡಿ ಬಂಡಿಹಾಳ, ಮಹೇಶ ಗಡಗಿ, ಮರಿಯಪ್ಪ ಸಿದ್ದನ್ನವರ, ಬಾಬು ಮೂಲಿಮನಿ, ಜಾಕೀರ ಮೂಲಿಮನಿ, ನಾಗರಾಜ ಯಳವತ್ತಿ, ಹಾಲಪ್ಪ ಕಬ್ಬೆರಳ್ಳಿ, ಹಾಲಪ್ಪ ಹರ್ತಿ, ಶಿವಾನಂದ ಚಾಕಲಬ್ಬಿ, ವಿಶ್ವನಾಥ ಪಾಟೀಲ, ರಾಜಕುಮಾರ ಪೂಜಾರ, ರವಿ ದೊಡ್ಡಮನಿ, ಹೇಮಣ್ಣ ಪೂಜಾರ, ಶೇಖಪ್ಪ ದೇಶಾಯಿ, ಶರಣಪ್ಪ ಶಿರುಂದ, ಹನಮಂತ ಪೂಜಾರ, ತಹಸೀಲ್ದಾರ ಯರಿಸ್ವಾಮಿ ಪಿ.ಎಸ್, ಇಓ ವಿಶ್ವನಾಥ ಹೊಸಮನಿ, ಕೃಷಿ ಅಧಿಕಾರಿ ಪ್ರಾಣೇಶ, ಮಂಜುನಾಥ ಕಲಬುರ್ಗಿ, ಸಣ್ಣ ನೀರಾವರಿ ಅಧಿಕಾರಿ ಪ್ರವೀಣಕುಮಾರ ಪಾಟೀಲ್, ಜಿ.ಪಂ ಅಭಿಯಂತರ ನಿಂಗಪ್ಪ ಬೇವಿನಮರದ, ಲೋಕೋಪಯೋಗಿ ಇಲಾಖೆಯ ನಾಗೇಂದ್ರ ಪಟ್ಟಣಶೆಟ್ಟರ, ಪಿಡಿಓ ಲತಾ ಮಾನೆ, ವಸಂತ ಗೋಕಾಕ, ಕಂದಾಯ ಅಧಿಕಾರಿ ಪ್ರಭು ಬಾಗಲಿ, ಗ್ರಾಮದ ಹಿರಿಯರು, ಯುವಕರು ಇದ್ದರು.

## ಶುದ್ಧ ಕುಡಿಯುವ ನೀರಿನ ಘಟಕ ಉದ್ಘಾಟನೆ ನಾಳೆ

■ ವಿಜಯಸಾಕ್ಷಿ ಸುದ್ದಿ, ಗದಗ

ಉತ್ತರ ಕರ್ನಾಟಕದ ಗ್ರಾಮೀಣ ಭಾಗದಲ್ಲಿ ತಾಂತ್ರಿಕ ಶಿಕ್ಷಣದಲ್ಲಿ ಹೆಸರುವಾಸಿಯಾಗಿ 40 ವರ್ಷಗಳಿಂದ ಸುದೀರ್ಘ ಸೇವೆ ಸಲ್ಲಿಸುತ್ತಿರುವ ಅಂಜುಮನ್-ಎ-ಇಸ್ಲಾಂ ಪಾಲಿಟೆಕ್ನಿಕ್‌ನಲ್ಲಿ ಜ.29ರ ಮುಂಜಾನೆ 11 ಗಂಟೆಗೆ 2023-2024ನೇ ಸಾಲಿನಲ್ಲಿ ವಿ.ಪ ಸದಸ್ಯ ಎಸ್.ವಿ. ಸಂಕನೂರರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿಯಲ್ಲಿ ಸಿದ್ಧಪಡಿಸಿದ ಶುದ್ಧ ಕುಡಿಯುವ ನೀರಿನ ಘಟಕದ ಉಧ್ಘಾಟನೆಯನ್ನು ವಿ.ಪ ಸದಸ್ಯ ಎಸ್.ವಿ. ಸಂಕನೂರ ನೆರವೇರಿಸಲಿದ್ದಾರೆ.

ಇದೇ ಸಂದರ್ಭದಲ್ಲಿ ವೈದ್ಯಕೀಯ ಸಮಾಲೋಚನೆ ಮತ್ತು ಪ್ರಥಮ ಚಿಕಿತ್ಸಾ ಘಟಕವನ್ನು ವೈದ್ಯರಾದ ಡಾ. ಎಸ್.ಬಿ. ಶೆಟ್ಟರ ಉದ್ಘಾಟಿಸುವರು. ಸಂಸ್ಥೆಯ ಅಧ್ಯಕ್ಷ ಜಾಕೀರ ಮುಜಾವರ, ಸಂಸ್ಥೆಯ ಕಾರ್ಯದರ್ಶಿ ಖಲೀಕ ಅಹಮದ್ ಮುಲ್ಲಾ, ಆಡಳಿತ ಮಂಡಳಿಯ ಸದಸ್ಯರು, ಬೋಧಕ/ಬೋಧಕೇತರ ಸಿಬ್ಬಂದಿಗಳು, ವಿದ್ಯಾರ್ಥಿಗಳು ಉಪಸ್ಥಿತರಿವರು ಎಂದು ಪ್ರಾಚಾರ್ಯ ಕೆ.ಎನ್. ರೇವಣಕರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶ್ರೀ ಗೌರಿ ಗಣೇಶ ಶಿಕ್ಷಣ ಸಂಸ್ಥೆಯಲ್ಲಿ ಗಣರಾಜ್ಯೋತ್ಸವ




■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಹುಯಿಲಗೋಳ ರಸ್ತೆಯ ಶ್ರೀಗೌರಿ ಗಣೇಶ ಶಿಕ್ಷಣ ಸಂಸ್ಥೆಯಲ್ಲಿ 76ನೇ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮಲ್ಲಿಕಾರ್ಜುನ ಹರ್ಲಾಪೂರ ಧ್ವಜಾರೋಹಣ ನೆರವೇರಿಸಿದರು.

ಮುಖ್ಯ ಅತಿಥಿಗಳಾಗಿ ಮಂಜುನಾಥ ಮುಳಗುಂದ ಮತ್ತು ಹನುಮಾನ್ ಸಿಂಗ್ ಜಮಾದಾರ ಆಗಮಿಸಿದ್ದರು. ಮಾಧ್ಯಮ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಹನುಮಾನ್ ಸಿಂಗ್ ಜಮಾದಾರ ಸನ್ಮಾನ ಸ್ವೀಕರಿಸಿ ಮಾತನಾಡಿ, ಗೌರಿ ಗಣೇಶ ಶಿಕ್ಷಣ ಸಂಸ್ಥೆಯು ಮಕ್ಕಳಿಗೆ ಒಳ್ಳೆಯ ಶಿಕ್ಷಣ ನೀಡುತ್ತದೆ ಎಂದು ಹೇಳಿದರು.

ಸಂಸ್ಥೆಯ ಅಧ್ಯಕ್ಷ ಪ್ರಕಾಶ ಎಸ್.ಮ್ಯಾಗೇರಿ, ನಿರ್ದೇಶಕ ಮಂಡಳಿಯ ಸದಸ್ಯರಾದ ಸತೀಶ ಕುಂದಗೋಳ, ಬಸವರಾಜ ಕುಂದಗೋಳ, ಶಿವಣ್ಣ ನಾಗರಾಳ, ಶರಣಪ್ಪ ಅಣ್ಣಿಗೇರಿ, ತಿಪ್ಪಣ್ಣ ನಾಗರಾಳ, ಉಮೇಶ ಅರಮನಿ, ಮಂಜುನಾಥ ಅವಾರಿ, ಶಿವರಾಜಕುಮಾರ ಗೊಂಡಬಾಳ, ಸುಭಾಷ ಕದಡಿ, ಸಂಗಮೇಶ ಮಾರನಬಸರಿ, ಸಿದ್ಧಲಿಂಗೇಶ್ವರ ಮುಳ್ಳಾಳ, ರಾಜು ಬೆಚಿತೂರ, ಮುತ್ತಪ್ಪ ಯಲಬುರ್ಗಿ, ಶಿಕ್ಷಣ ಸಂಸ್ಥೆಯ ಮುಖ್ಯೋಪಾಧ್ಯಾಯರು ಮತ್ತು ಶಿಕ್ಷಕರು, ಬೋಧಕೇತರ ಸಿಬ್ಬಂದಿ ವರ್ಗದವರು ಪಾಲ್ಗೊಂಡಿದ್ದರು.

## SDPI ವತಿಯಿಂದ 76ನೇ ಗಣರಾಜ್ಯೋತ್ಸವ



■ ವಿಜಯಸಾಕ್ಷಿ ಸುದ್ದಿ, ಗದಗ

ಸೋಶಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾ ವತಿಯಿಂದ ಗಣರಾಜ್ಯೋತ್ಸವದ ಧ್ವಜಾರೋಹಣವನ್ನು ಗದಗ ಜಿಲ್ಲಾಧ್ಯಕ್ಷ ಬಿಲಾಲ್ ಗೋಕಾವಿ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಭಾರತ ಗಣರಾಜ್ಯವಾಗಲು, ಸಂವಿಧಾನ ಜಾರಿಗೆ ತರಲು ಶ್ರಮಿಸಿದ ಎಲ್ಲರನ್ನೂ ಸಹ ನೆನೆಯುವ ದಿನ ಇದಾಗಿದೆ ಎಂದರು.

ಪಕ್ಷದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅನ್ವರ್ ಬಾಗೇವಾಡಿ ಮಾತನಾಡಿ, ಭಾರತ ಜಾತ್ಯಾತೀತ ರಾಷ್ಟ್ರ. ಭಾರತದಲ್ಲಿ ಎಲ್ಲ ಪ್ರಜೆಗಳಿಗೂ ಸಮಾನ ಹಕ್ಕಿದೆ. ಶಿಕ್ಷಣ, ಸಮಾನತೆ, ವಾಕ್ ಸ್ವಾತಂತ್ರ್ಯ, ಇಚ್ಛೆಯ ಧರ್ಮವನ್ನು ಸ್ವೀಕರಿಸುವ ಹಕ್ಕು, ಎಲ್ಲಿ ಬೇಕಾದರೂ ಜೀವಿಸುವ ಹಕ್ಕು, ಹೀಗೆ ಇಷ್ಟೆಲ್ಲ ಹಕ್ಕುಗಳು ಇದ್ದರೂ, ದೇಶದ ಪ್ರಜೆಗಳ ಸಾಂವಿಧಾನಿಕ ಹಕ್ಕುಗಳನ್ನು ಕಸಿಯುವ ಪ್ರಯತ್ನ ನಡೆಯುತ್ತಿದ್ದು, ದುಷ್ಟಶಕ್ತಿಗಳನ್ನು ಶಮನ ಮಾಡಿ ಹಸಿವು ಮತ್ತು ಭಯ ಮುಕ್ತ ರಾಷ್ಟ್ರ ನಿರ್ಮಾಣದ ಶಪಥ ಮಾಡೋಣ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಉಪಾಧ್ಯಕ್ಷ ಹಿದಾಯತುಲ್ಲಾ ಕಾಗದಗಾರ, ಗದಗ ವಿಧಾನಸಭಾ ಕ್ಷೇತ್ರದ ಅಧ್ಯಕ್ಷ ಅಫ್ಘಾನ್ ತರಾಫ್ದರ್, ಅನ್ವರ್ ಮುಲ್ಲಾ, ಸಮೀರ್ ಕೊಟ್ಟೂರ್, ವಾಸೀಮ್ ರಬಕವಿ, ಮುಸ್ತಾಕ್ ಕಟ್ಟಿಮನಿ ಮುಂತಾದವರಿದ್ದರು.

**ಅಂಬಿಗ ಯುವ ಸೇನಾ ಸಂಘಟನೆಯಿಂದ ಶ್ರೀ ನಿಜಶರಣ ಅಂಬಿಗರ ಚೌಡಯ್ಯ ಜಯಂತಿ**

# ಚೌಡಯ್ಯನವರ ಆದರ್ಶಗಳನ್ನು ಅಳವಡಿಸಿಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ರಂಗನವಾಡ ಓಣಿಯ ಅಂಬಿಗ ಯುವ ಸೇನಾ ಸಂಘಟನೆ ವತಿಯಿಂದ ಶ್ರೀ ನಿಜಶರಣ ಅಂಬಿಗರ ಚೌಡಯ್ಯ ಜಯಂತಿ ಸಮಾರಂಭ ಜರುಗಿತು.




ಸಮಾರಂಭವನ್ನು ಜೆ.ಬಿ. ಗಾರವಾಡ, ಡಾ. ಗಣೇಶ ಸುಲ್ತಾನಪುರ, ಯಶೋಧಾ ಜಾಲಗಾರ ಉದ್ಘಾಟಿಸಿದರು. ಶ್ರೀ ನಿಜಶರಣ ಅಂಬಿಗರ ಚೌಡಯ್ಯ ವಿವಿಧೋದ್ದೇಶಗಳ ಸೇವಾ ಟ್ರಸ್ಟಿನ ಅಧ್ಯಕ್ಷ ಜೆ.ಬಿ. ಗಾರವಾಡ ಮಾತನಾಡಿ, ನಮ್ಮ ಜಿಲ್ಲಾಮಟ್ಟದ ಸಂಘಟನೆಯಲ್ಲಿ ಯುವಕರು, ಮಹಿಳೆಯರು ಹೆಚ್ಚು ಹೆಚ್ಚು ಸದಸ್ಯತ್ವ ಪಡೆಯಲು ಮುಂದಾಗಬೇಕು ಎಂದರು.

> ಜಿಲ್ಲಾ ಮುಖಂಡ ಡಾ. ಗಣೇಶ ಸುಲ್ತಾನಪುರ ಮಾತನಾಡಿ, ಸಂಘಟನೆಯ ಮೂಲಕ ಹಿಂದುಳಿದ ಗಂಗಾಮತ ಸಮಾಜದ ಬಡ ಕುಟುಂಬಗಳಿಗೆ, ಸ್ವ-ಉದ್ಯೋಗಿಗಳಿಗೆ, ವಿದ್ಯಾರ್ಥಿಗಳಿಗೆ ಸರ್ಕಾರದ ವಿವಿಧ ಯೋಜನೆಗಳ ಸದುಪಯೋಗಪಡಿಸಿಕೊಳ್ಳಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಬೆಟಗೇರಿಯ ಅಂಬಿಗರ ಮಹಿಳಾ ಸಂಘದ ಅಧ್ಯಕ್ಷೆ ಯಶೋಧಾ ಜಾಲಗಾರ ಮಾತನಾಡಿದರು. ವೇದಿಕೆಯ ಮೇಲೆ ಕರಿಯಪ್ಪ ಗುಡಿಸಾಗರ, ಕಲ್ಲಪ್ಪ ಬಾರಕೇರ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಪ್ರಮುಖರಾದ ವಿನೋದ ಜಕನೂರ, ಸುನೀಲ ಮಾನ್ವಿ, ಕೃಷ್ಣ ಬಾರಕೇರ, ನೀಲಕಂಠ ಗುಡಿಸಾಗರ, ರಾಜು ಬಾರಕೇರ, ಹನಮಂತ ಮಾನ್ವಿ, ಪರಶುರಾಮ ಬಾರಕೇರ, ಯಲ್ಲಪ್ಪ ಬಾರಕೇರ, ರಾಘವೇಂದ್ರ ಜಕನೂರ, ನಾಗರಾಜ ಬಾರಕೇರ, ನೀಲಕಂಠ ಗುಡಿಸಾಗರ, ಚೇತನ ಮಾನ್ವಿ, ಸಾಗರ ಮಾನ್ವಿ, ಕಾರ್ತಿಕ ಮಾನ್ವಿ, ರೋಹಿತ್ ಜಕನೂರ, ಪ್ರಜ್ವಲ್ ಬಾರಕೇರ, ಮಂಜು ಮಲ್ಲಾಪೂರ, ರಾಮು ಬಾರಕೇರ, ಶಂಕರ ಬಾರಕೇರ, ಧನುಷ ಬಾರಕೇರ, ತೇಜಸ್ ಬಾರಕೇರ, ನಾಗರಾಜ ಮಡ್ಡಿ, ಪ್ರದೀಪ ದೇವಗಿರಿ, ಬಸವರಾಜ ಜಿಗಳೂರ, ರವಿ ಜಾಲವಾದಿ, ಸಂಜು ಮಲ್ಲಾಪೂರ, ಉಡಚಮ್ಮ ಮಾನ್ವಿ, ಬಸವಣೆವ್ವ ಬಾರಕೇರ, ಯಲ್ಲಮ್ಮ ಮಡ್ಡಿ, ಪಾರವ್ವ ಜನಕೂರ, ರೇಣುಕಾ ಮಾನ್ವಿ, ಮಂಜುಳಾ ಮಾನ್ವಿ, ಶಾಂತಾ ಮಾನ್ವಿ, ಕಮಲವ್ವ ಮಲ್ಲಾಪೂರ, ಸುಜಾತಾ ಬಾರಕೇರ, ರೇಖಾ ಬಾರಕೇರ, ಶಾಂತಮ್ಮ ಮಾನ್ವಿ, ಪುಷ್ಪಾ ಬಾರಕೇರ, ಸುನಿತಾ ಮನಗೂಳಿ, ಪುಷ್ಪಾ ಜಕನೂರ, ಶೀಲಾ ಜಕನೂರ, ಸರಸ್ವತಿ ಜಕನೂರ, ಕೀರ್ತಿ ಜಕನೂರ, ಕವಿತಾ ಬಾರಕೇರ, ದೀಪಾ ಮಡ್ಡಿ, ಸಹನಾ ಮಾನ್ವಿ, ಪರಶುರಾಮ ಜಕನೂರ, ಪರಶುರಾಮ ಮಾನ್ವಿ, ವೆಂಕಟೇಶ ಬಾರಕೇರ, ನಿಂಗರಾಜ ಬಾರಕೇರ, ಸಂಜು ಮಲ್ಲಾಪೂರ ಮುಂತಾದವರಿದ್ದರು.

ಪ್ರೀತಮ್ ಬಾರಕೇರ, ಪ್ರಜ್ವಲ್ ಬಾರಕೇರ ವಚನ ಗೀತೆಗಳನ್ನು ಹೇಳಿದರು. ಕಮಲಾಬಾಯಿ ಮಲ್ಲಾಪೂರ ಪ್ರಾರ್ಥಿಸಿದರು. ವಿನೋದ ಜಕನೂರ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

'ಕನ್ನಡ ಶಾಸನಗಳ ಅಧ್ಯಯನ, ಸಂಶೋಧನಾ ಕಾರ್ಯಾಗಾರ' ಉದ್ಘಾಟಿಸಿದ ಪ್ರೊ. ಪರಮಶಿವಮೂರ್ತಿ

# ಶಾಸನಗಳ ಕುರಿತು ನಿಷ್ಕಾಳಜಿ ಸಲ್ಲದು

**■ವಿಜಯಸಾಕ್ಷಿ ಸುದ್ದಿ, ಗದಗ**

ಶಾಸನಗಳು ಕೇವಲ ಇತಿಹಾಸದ ವಿವರಗಳಲ್ಲ. ಅವು ನಮ್ಮ ಭವ್ಯ ಪರಂಪರೆಯ ಕುರುಹುಗಳಾಗಿದ್ದು, ಸದ್ಯ ನಮ್ಮನ್ನು ಕಾಡುತ್ತಿರುವ ಸಮಕಾಲೀನ ತಲ್ಲಣಗಳಿಗೆ ಶಾಸನಗಳ ಅಧ್ಯಯನ ಅಥವಾ ವಿಮರ್ಶೆ ಪರಿಹಾರ ನೀಡಬಲ್ಲದು ಎಂದು ಹಂಪಿ ಕನ್ನಡ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಪರಮಶಿವಮೂರ್ತಿ ನುಡಿದರು.

ಸೋಮವಾರ ನಗರದ ಬಸವೇಶ್ವರ ವಿಜ್ಞಾನ, ವಾಣಿಜ್ಯ ಹಾಗೂ ಕಲಾ ಮಹಾವಿದ್ಯಾಲಯದಲ್ಲಿ ಜ.27ರಿಂದ 31ರವರೆಗೆ ಜರುಗಲಿರುವ 'ಕನ್ನಡ ಶಾಸನಗಳ ಅಧ್ಯಯನ ಮತ್ತು ಸಂಶೋಧನೆ' ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ನಮ್ಮ ಪೂರ್ವಿಕರು ಕನಿಷ್ಠ ಸವಲತ್ತುಗಳ ಮಧ್ಯೆಯೂ ಮೌಲ್ಯಯುತ ಜೀವನ ಸಾಗಿಸುತ್ತಿದ್ದರು ಹಾಗೂ ಮನಃಶಾಂತಿಯೇ ಶ್ರೇಷ್ಠ ಸಂಪತ್ತು ಎಂಬ ಪ್ರಜ್ಞೆ ಅವರಿಗೆ ಇತ್ತು ಎನ್ನುವ ವಿವರಗಳನ್ನು ಶಾಸನಗಳಂತಹ ಪುರಾತತ್ವ ಆಕರಗಳು ತಿಳಿಸುತ್ತವೆ. ನಗರೀಕರಣವು ಉತ್ತುಂಗ ತಲುಪಿರುವ ಇಂದಿನ ದಿನಗಳಲ್ಲಿ ಮನುಷ್ಯತ್ವಕ್ಕೆ ಬೆಲೆ ಇಲ್ಲದಂತಾಗಿದೆ. ಬದುಕು ಮೌಲ್ಯರಹಿತವಾಗುತ್ತಿದೆ, ಶಾಸನಗಳು ಸ್ಥಳೀಯ ಇತಿಹಾಸವನ್ನು ಪರಿಣಾಮಕಾರಿಯಾಗಿ ತಿಳಿಸಿ ಕೊಡುವುದರಿಂದ ವರ್ತಮಾನದ ಪುನರಾವಲೋಕನಕ್ಕೆ ಅವುಗಳ ಅಧ್ಯಯನ ದಿವ್ಯ ಔಷಧವಾಗಿದೆ ಎಂದರು.

ಗದಗ ಜಿಲ್ಲೆಯ ಬಹುತೇಕ ಹಳ್ಳಿಗಳಲ್ಲಿ ಸಾವಿರ ವರ್ಷಕ್ಕೂ ಹೆಚ್ಚು ಪುರಾತನವಾದ ಅನೇಕ ಶಾಸನಗಳಿದ್ದು, ಅವುಗಳ ಅಧ್ಯಯನದ ವಿವರಗಳುಳ್ಳ ಗ್ರಂಥವನ್ನು ಶೀಘ್ರವೇ ಓದುಗರ ಕೈಗಿಡಲಿದ್ದೇನೆ. ಶಾಸನಗಳ ಕುರಿತು



ನಿಷ್ಕಾಳಜಿ-ಅನಾದರ ಸಲ್ಲದು. ಅವುಗಳ ಸಂರಕ್ಷಣೆ ಹಾಗೂ ಅಧ್ಯಯನ ಇಂದಿನ ಅನಿವಾರ್ಯತೆಯಾಗಿದೆ ಎಂದರು.

ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದ ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಮಾತನಾಡಿ, ಶಾಸನಗಳನ್ನು ಓದಿ-ಅರ್ಥೈಸುವ ತಜ್ಞರ ಕೊರತೆ ಇಂದು ಹೆಚ್ಚಿದ್ದು, ಅದಕ್ಕೆ ಪರಿಹಾರವೆಂಬಂತೆ ಇಂತಹ ಕಾರ್ಯಾಗಾರವನ್ನು ಆಯೋಜಿಸಿರುವುದು ಶ್ಲಾಘನೀಯ. ಜನಪದ, ಲಾವಣಿ ಪದ, ವೀರಗಲ್ಲು-ಮಾಸ್ತಿಗಲ್ಲು ಹಾಗೂ ಶಾಸನಗಳು ಜನಸಾಮಾನ್ಯರ ನೈಜ ಇತಿಹಾಸವನ್ನು ತಿಳಿಸುವ ಆಕರಗಳಾಗಿವೆ. ಗ್ರಾಮೀಣ ಪ್ರದೇಶಗಳಲ್ಲಿ ಶಾಸನಗಳ ಕುರಿತು ಇರುವ ಅವಜ್ಞೆ ಕಳವಳಕಾರಿಯಾಗಿದೆ. ಇತಿಹಾಸದ ಮೇಲೆ ಹೊಸ ಬೆಳಕನ್ನು ಚೆಲ್ಲಲು ನೆರವಾಗುವ ಶಾಸನಗಳನ್ನು ರಕ್ಷಿಸಲು ಇರುವ ಸಂಸ್ಥೆಗಳಿಗೆ ಸರ್ಕಾರ ನೆರವಿನ ಹಸ್ತ ಚಾಚಬೇಕಿದೆ ಎಂದರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಹಿರಿಯ ಶಾಸನ ತಜ್ಞರಾದ ಡಾ. ಹನುಮಾಕ್ಷಿ ಗೋಗಿ ಮಾತನಾಡಿ, ಗದಗ ಜಿಲ್ಲೆ ಕರ್ನಾಟಕದ ನಿಜವಾದ ಸಾಂಸ್ಕೃತಿಕ ರಾಜಧಾನಿಯಾಗಿದೆ. ಇನ್ನೂ ಅಧ್ಯಯನಕ್ಕೆ ಒಳಪಡಬೇಕಾದ ಅನೇಕ ಶಾಸನಗಳು ಇಲ್ಲಿವೆ. ಭಾರತದ ಶಾಸನಗಳ ಅಧ್ಯಯನದಲ್ಲಿ ವಿದೇಶಿಗರ ಕೊಡುಗೆಯೂ ಸಾಕಷ್ಟಿದ್ದು, ಶಾಸನಗಳ ಕುರಿತು ಗ್ರಾಮೀಣ ಜನರು ಬೆಳೆಸಿಕೊಂಡಿರುವ ಮೂಢನಂಬಿಕೆಯನ್ನು ಅಳಿಸಬೇಕಾಗಿದೆ. ಕೇವಲ 30-35 ವರ್ಷಗಳ ಹಿಂದೆ ಕಾಣಸಿಗುತ್ತಿದ್ದ ಶಾಸನಗಳು ಇಂದು ಕಣ್ಮರೆಯಾಗಿದ್ದು, ಈ ಕುರಿತು ಗಂಭೀರ ಚಿಂತನೆಗಳು ನಡೆಯಬೇಕಿದೆ ಎಂದರು.

ಮೈಸೂರಿನ ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರದ ಯೋಜನಾ ನಿರ್ದೇಶಕ ಪ್ರೊ. ಎನ್.ಎಂ ತಳವಾರ ಸ್ವಾಗತಿಸಿ ಕಾರ್ಯಗಾರದ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು. ಬಸವೇಶ್ವರ ಮಹಾವಿದ್ಯಾಲಯದ ವಿದ್ಯಾರ್ಥಿನಿಯರು ಪ್ರಾರ್ಥಿಸಿದರು. ವೇದಿಕೆ ಮೇಲೆ ಮಾಜಿ ಸಚಿವರಾದ ಎಸ್.ಎಸ್. ಪಾಟೀಲ, ಬಸವೇಶ್ವರ ಮಹಾವಿದ್ಯಾಲಯದ ಪ್ರಾಚಾರ್ಯರಾದ ಎಂ.ಎಂ. ಬುರಡಿ ಉಪಸ್ಥಿತರಿದ್ದರು.

ಚಂದ್ರಪ್ಪ ಬಾರಂಗಿ ನಿರೂಪಿಸಿದರು. ಡಾ. ಎಂ.ಎಂ. ಕಲಬುರ್ಗಿ ಅಧ್ಯಯನ ಸಂಸ್ಥೆಯ ಸಂಯೋಜಕರಾದ ಡಾ. ಅರ್ಜುನ ಗೊಳಸಂಗಿ ವಂದಿಸಿದರು. ಶಿಬಿರಾರ್ಥಿಗಳು ಹಾಗೂ ಕಾಲೇಜಿನ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಸಾಪ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಶಾಸನಗಳು ಅಥವಾ ಯಾವುದೇ ಪ್ರಾಚ್ಯ ಅವಶೇಷಗಳ ಕುರಿತು ಇರುವ ಅಸಡ್ಡೆಗೆ ಶಿಕ್ಷಣದ ಅಥವಾ ತಿಳುವಳಿಕೆಯ ಕೊರತೆ ಕಾರಣವಾಗಿದೆ. ಮಕ್ಕಳಿಗೆ ಪ್ರೌಢ ಶಿಕ್ಷಣ ಹಂತದಲ್ಲೇ ಪ್ರಾಚ್ಯವಸ್ತುಗಳ ಮಹತ್ವದ ಕುರಿತು ಅರಿವು ಮೂಡಿಸಿ ಅವುಗಳ ಕುರಿತು ಆಸಕ್ತಿಯನ್ನು ಹುಟ್ಟುಹಾಕಬೇಕು. ಅಂದಾಗ ಮಾತ್ರ ಶಾಸನಗಳ ಸಂರಕ್ಷಣೆ-ಅಧ್ಯಯನ ಸಾಧ್ಯ ಎಂದರು.

ನ್ಯಾಷನಲ್ ಇಂಟಿಗ್ರೇಟೆಡ್ ಮೆಡಿಕಲ್ ಅಸೋಸಿಯೇಷನ್ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭ

# ಸಾರ್ವಜನಿಕರಿಗೆ ಉತ್ತಮ ಆರೋಗ್ಯ ಸೇವೆ ನೀಡೋಣ

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಲೋಟಸ್ ಇನ್ ಹೋಟೆಲ್‌ನಲ್ಲಿ 2024-2026ನೇ ಸಾಲಿನ ನ್ಯಾಷನಲ್ ಇಂಟಿಗ್ರೇಟೆಡ್ ಮೆಡಿಕಲ್ ಅಸೋಸಿಯೇಷನ್ (NIMA)ನ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ಹಾಗೂ ಸೌಖ್ಯದಾ ಆಸ್ಪತ್ರೆಯ ಸಹಯೋಗದೊಂದಿಗೆ ಸಿಎಂಇ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.



ರಾಜ್ಯ ಉಪಾಧ್ಯಕ್ಷ, ಜಿಲ್ಲಾ ಘಟಕದ ಅಧ್ಯಕ್ಷರಾದ ಡಾ. ಜಯಕುಮಾರ ಬ್ಯಾಳಿ ಮಾತನಾಡಿ, ಓಋಒಂ ಸಂಘಟನೆಯು 1948ರಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರಿಂದ ಉದ್ಘಾಟಿಸಲ್ಪಟ್ಟ ರಾಷ್ಟ್ರಮಟ್ಟದ ನೋಂದಾಯಿತ ಸಂಸ್ಥೆಯಾಗಿದ್ದು, ರಾಜ್ಯದಲ್ಲಿ ಅತೀ ಹೆಚ್ಚು ಸದಸ್ಯರನ್ನು ಹೊಂದಿದೆ. ಮುಂದಿನ ಎರಡು ವರ್ಷಗಳವರೆಗೆ ಸಾರ್ವಜನಿಕರಿಗೆ ಉತ್ತಮ ಆರೋಗ್ಯ ಸೇವೆ ನೀಡುವ ನಿಟ್ಟಿನಲ್ಲಿ ಕೈಗೊಳ್ಳಬೇಕಾದ ಕಾರ್ಯಕ್ರಮಗಳ ರೂಪರೇಷೆಗಳ ಬಗ್ಗೆ ತಿಳಿಸಿದರು.

ಜಿಲ್ಲಾ ಆಯುಷ್ ಅಧಿಕಾರಿಗಳಾದ ಡಾ. ಜಯಪಾಲ ಸಿಂಗ್ ಸಮೋರೆಕರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತಾ, ಆಯುಷ್ ಇಲಾಖೆ ಹಾಗೂ ಓಋಒಂ ಜಂಟಿ ಸಹಯೋಗದೊಂದಿಗೆ ಆಯುಷ್ ಚಿಕಿತ್ಸಾ ಪದ್ಧತಿಯನ್ನು ಜನಸಾಮಾನ್ಯರಿಗೆ ತಲುಪಿಸುವಲ್ಲಿ ಕಾರ್ಯ ಪ್ರವೃತ್ತರಾಗೋಣ ಎಂದರು.

ಸಿಎಂಇ ಕಾರ್ಯಕ್ರಮದ ಅಂಗವಾಗಿ ಸೌಖ್ಯದಾ ಆಸ್ಪತ್ರೆಯಿಂದ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ಚಿಕ್ಕ ಮಕ್ಕಳ ತಜ್ಞರಾದ ಡಾ. ಶಿವನಗೌಡ ಜೋಳದರಾಶಿ, ನವಜಾತ ಶಿಶುಗಳ ಆರೈಕೆ ಹಾಗೂ ಡಾ. ಪ್ರವೀಣ ಡಂಬಳ ಮೂತ್ರ ರೋಗಗಳ ಬಗ್ಗೆ ಸವಿಸ್ತಾರವಾಗಿ ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಡಾ. ಎಸ್.ಆರ್. ಹಿರೇಮಠ ನೂತನ ಅಧ್ಯಕ್ಷರಾದ ಡಾ. ಜಯಕುಮಾರ್ ಬ್ಯಾಳಿ, ಕಾರ್ಯದರ್ಶಿಗಳಾದ ಡಾ. ಬಸವರಾಜ ಚನ್ನಪ್ಪಗೌಡ್ರ, ಖಜಾಂಚಿಗಳಾದ ಡಾ. ಗಿರೀಶ ಬಡಿಗೇರ ಹಾಗೂ ಪದಾಧಿಕಾರಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿ ಮಾತನಾಡಿ, ಸಂಘದ ಎಲ್ಲಾ ಪದಾಧಿಕಾರಿಗಳು ಹಾಗೂ ಸದಸ್ಯರು ನಿಸ್ವಾರ್ಥ ಸೇವೆಯೊಂದಿಗೆ ಸಮಾಜಮುಖಿಯಾಗಿ ಕೆಲಸ ನಿರ್ವಹಿಸಿ ಸಂಘಟನೆಯನ್ನು ಬಲಿಷ್ಠಗೊಳಿಸಬೇಕೆಂದು ತಿಳಿಸಿದರು.

ಡಾ. ರಾಜೇಶ್ವರಿ ಹಿರೇಮಠ ಹಾಗೂ ಡಾ. ಉಮಾ ಗಾಣಿಗೇರ ಧನ್ವಂತರಿ ಪ್ರಾರ್ಥನೆ ಹಾಡಿದರು. ರೋಣದ ರಾಜೀವ್ ಗಾಂಧಿ ಆಯುರ್ವೇದಿಕ್ ಮೆಡಿಕಲ್ ಕಾಲೇಜಿನ ಪ್ರಾಚಾರ್ಯ ಡಾ. ಐ.ಬಿ. ಕೊಟ್ಟೂರ್‌ಶೆಟ್ಟಿ ಸ್ವಾಗತಿಸಿದರು. ಡಾ. ಗಿರೀಶ ಬಡಿಗೇರವರು ಓಋಒಂ ಇತಿಹಾಸವನ್ನು ತಿಳಿಸಿ ಕಾರ್ಯಕ್ರಮ ನಿರೂಪಿಸಿದರು. ಸಂಘದ ನೂತನ ಕಾರ್ಯದರ್ಶಿಗಳಾದ ಡಾ. ಬಸವರಾಜ ಚನ್ನಪ್ಪಗೌಡ್ರ ವಂದಿಸಿದರು.

ಮುಖ್ಯ ಅತಿಥಿಗಳಾದ ಡಾ. ಜಿ.ಬಿ. ಪಾಟೀಲ ಮಾತನಾಡಿ, ಸಂಘಟನೆಯು ಇಂದಿನ ದಿನಮಾನಗಳಲ್ಲಿ ಅತ್ಯಂತ ಅವಶ್ಯಕವಾಗಿದ್ದು, ರಾಜ್ಯ ಮಟ್ಟದಲ್ಲಿಯೇ ಅತ್ಯುತ್ತಮ ಸಂಘಟನೆಯಾಗಿ ಹೊರಹೊಮ್ಮಬೇಕೆಂದು ತಿಳಿಸಿದರು. ಇನ್ನೋರ್ವ ಅತಿಥಿ ಡಾ. ಯು.ವಿ. ಪುರದ ಮಾತನಾಡಿ, ಈ ಸಂಘಟನೆಯ ಕಾರ್ಯ ಚಟುವಟಿಕೆಗಳಲ್ಲಿ ಎಲ್ಲ ಸದಸ್ಯರು ಕುಟುಂಬ ಸಮೇತ ಭಾಗವಹಿಸಿ ಭಾವನಾತ್ಮಕ ಸಂಬಂಧವನ್ನು

# ಪುಚ್ಚಿರೇಶ್ವರ ಜ್ಯೋತಿ ರಥಯಾತ್ರೆಗೆ ಚಾಲನೆ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಫೆಬ್ರುವರಿ 5, 6 ಮತ್ತು 7ರಂದು ನಡೆಯುವ ಹಠಯೋಗಿ ಶ್ರೀ ವೀರಪ್ಪಜ್ಜನ ಪುಣ್ಯಾರಾಧನೆಯ ಶತಮಾನೋತ್ಸವದ ನಿಮಿತ್ತ ಶ್ರೀಮಠದಲ್ಲಿ ಶ್ರೀ ವೀರಪ್ಪಜ್ಜನ ಜ್ಯೋತಿ ರಥಯಾತ್ರೆಗೆ ಟ್ರಸ್ಟ್ ಕಮಿಟಿ ಅಧ್ಯಕ್ಷ ಡಾ. ಎಂ.ಸಿ. ಚಪ್ಪನ್ನಮಠ ಚಾಲನೆ ನೀಡಿದರು.



ಈ ವೇಳೆ ಟ್ರಸ್ಟ್ ಕಮಿಟಿ ಅಧ್ಯಕ್ಷ ಡಾ. ಎಂ.ಸಿ. ಚಪ್ಪನ್ನಮಠ ಮಾತನಾಡಿ, ಯಾವುದು ಹೌದು ಅದು ಅಲ್ಲ, ಯಾವುದು ಅಲ್ಲ ಅದು ಹೌದು ಎಂಬ ವೇದ ವಾಕ್ಯವನ್ನು ನೀಡಿದ ಸಂತ ಶ್ರೀ ವೀರಪ್ಪಜ್ಜ. ಅಂತಹ ಮಹಾನ್ ಸಂತರ ಶತಮಾನೋತ್ಸವ ಆಚರಿಸುತ್ತಿರುವ ನಾವೇ ಧನ್ಯರು. ಅಜ್ಜನ ಪುಣ್ಯಾರಾಧನೆ ಶತಮಾನೋತ್ಸವದ ನಿಮಿತ್ತ ಪ್ರತಿ ಹಳ್ಳಿ, ಪಟ್ಟಣ, ನಗರ ಪ್ರದೇಶದಲ್ಲಿ ವೀರಪ್ಪಜ್ಜನ ಬಗ್ಗೆ ತಿಳಿಸಲು ಹಾಗೂ ಶತಮಾನೋತ್ಸವಕ್ಕೆ ಆಮಂತ್ರಿಸಲು ಜ್ಯೋತಿ ರಥಯಾತ್ರೆ ಪ್ರಾರಭಿಸಿದ್ದೇವೆ.

ಪವಾಡ ಪುರುಷ ವೀರಪ್ಪಜ್ಜ ಅನೇಕ ಪವಾಡವನ್ನು ತೋರಿಸಿದ್ದಾನೆ. ಎಲ್ಲರೂ ಸೇರಿ ಅಜ್ಜನ ಪುಣ್ಯಾರಾಧನೆಯನ್ನು ಶ್ರದ್ಧಾ-ಭಕ್ತಿಯಿಂದ ಆಚರಿಸಿ ಯಶಸ್ವಿಗೊಳಿಸೋಣ ಎಂದರು.

ಪ.ಪಂ ಅಧ್ಯಕ್ಷ ಫಕೀರಪ್ಪ ಮಳ್ಳಿ, ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ, ಶಿವನಗೌಡ ಪಾಟೀಲ, ಡಾ. ಎಲ್.ಎಸ್. ಗೌರಿ, ಸುನೀಲ ಬಸವರಡ್ಡೇರ, ಮುತ್ತಪ್ಪ ನೂಲ್ಕಿ, ಶೇಖಪ್ಪ ಜುಟ್ಲ, ಅಮೃತಯ್ಯ ಅಣ್ಣಿಗೇರಿಮಠ, ಶೇಖಪ್ಪ ಕೆಂಗಾರ, ಈರಪ್ಪ ಜೋಗಿ, ಪಿ.ಬಿ. ನಾಡಗೌಡ್ರ, ಮೈಲಾರಪ್ಪ ಚಳ್ಳಮರದ, ಅಲ್ಲಾಭಕ್ಷ ನದಾಫ್, ಬಾಳಪ್ಪ ಕಳಕಣ್ಣವರ, ಎಂ.ಎಸ್. ಮಲ್ಲನಗೌಡ್ರ, ಕೃಷ್ಣ ಜುಟ್ಲ, ಬಸವರಾಜ, ಉಮೇಶ ಅರಹುಣಶಿ ಮುಂತಾದವರಿದ್ದರು.

# ಹೆಸ್ಕಾಂ ಉಪವಿಭಾಗ ಪ್ರಾರಂಭಿಸಲು ಮನವಿ

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ನಗರದಲ್ಲಿ ಹೆಸ್ಕಾಂ ಉಪವಿಭಾಗ ಪ್ರಾರಂಭಿಸಬೇಕೆಂದು ಸ್ಥಳೀಯ ಕುಂದುಕೊರತೆ ನಿವಾರಣಾ ಸಮಿತಿ ವತಿಯಿಂದ ಹೆಸ್ಕಾಂ ಅಧ್ಯಕ್ಷ ಅಜ್ಜಂಪೀರ ಖಾದ್ರಿ ಹಾಗೂ ಪ್ರಧಾನ ವ್ಯವಸ್ಥಾಪಕರಿಗೆ ಮನವಿ ಸಲ್ಲಿಸಲಾಯಿತು.



ಈ ಸಂದರ್ಭದಲ್ಲಿ ಮಾತನಾಡಿದ ಅಕ್ಬರಸಾಬ ಯಾದಗಿರಿ, ಶಿರಹಟ್ಟಿಯಲ್ಲಿ ಹೆಸ್ಕಾಂ ಉಪವಿಭಾಗ ಮಾಡಲು ಹೆಸ್ಕಾಂ ಇಲಾಖೆಗೆ ಹಲವಾರು ಬಾರಿ ಮನವಿ ಸಲ್ಲಿಸಿದರೂ ಪ್ರಯೋಜನವಾಗಿಲ್ಲ. ನಮ್ಮ ಬೇಡಿಕೆ ಕಾರ್ಯರೂಪಕ್ಕೆ ಬರದಿದ್ದಲ್ಲಿ ಉಗ್ರ ಹೋರಾಟ ನಡೆಸುತ್ತೇವೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಎನ್.ಆರ್. ಕುಲಕರ್ಣಿ, ಶ್ರೀನಿವಾಸ ಬಾರಬಾರ ಮುಂತಾದವರು ಉಪಸ್ಥಿತರಿದ್ದರು.

# ಪರಶುರಾಮ ಹಿತ್ತಲಮನಿಗೆ ಪುರಸಭೆಯಿಂದ ಸನ್ಮಾನ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಪುರಸಭೆಯ ಪೌರ ಕಾರ್ಮಿಕ ಪರಶುರಾಮ ಹಿತ್ತಲಮನಿ ಅವರು ಉತ್ತಮ ಬಿಎಲ್‌ಓ ಎಂದು ತಾಲೂಕು ಆಡಳಿತ ಗುರುತಿಸಿ ಗಣರಾಜ್ಯೋತ್ಸವದ ಆಚರಣೆಯ ಸಂದರ್ಭದಲ್ಲಿ ಸನ್ಮಾನಿಸುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದು ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಹೇಳಿದರು.



ಪಟ್ಟಣದ ಪುರಸಭೆಯ ಕಚೇರಿಯ ಮುಂಭಾಗದಲ್ಲಿ ಸೋಮವಾರ ಪುರಸಭೆ ವತಿಯಿಂದ ಪರಶುರಾಮ ಹಿತ್ತಲಮನಿ ಅವರನ್ನು ಸನ್ಮಾನಿಸಿ ಮಾತನಾಡಿದರು.

ಪೌರಕಾರ್ಮಿಕ ವೃತ್ತಿಯಲ್ಲಿದ್ದರೂ ಸಹ ಪುರಸಭೆಯಿಂದ ನೀಡಿದ ಕಾರ್ಯವನ್ನ ಪ್ರಾಮಾಣಿಕತೆಯಿಂದ ಮಾಡುವ ಮೂಲಕ ಯಶಸ್ಸು ಸಾಧಿಸಿದ್ದು, ಅವರ ಕಾರ್ಯದಲ್ಲಿ ಸಾಧಿಸಿರುವ ಯಶಸ್ಸು ನಮ್ಮ ಪುರಸಭೆಗೆ ಉತ್ತಮ ಹೆಸರು ತಂದಿದೆ. ಅವರು ತಮ್ಮ ಕಾರ್ಯದಲ್ಲಿ ಸದಾ ಸಾಧನೆ ಮಾಡುವಂತಾಗಲಿ ಎಂದು ಹೇಳಿದರು.

ಈ ವೇಳೆ ವ್ಯವಸ್ಥಾಪಕಿ ಮಂಜುಳಾ ಹೂಗಾರ, ಹಿರಿಯ ಆರೋಗ್ಯ ನಿರೀಕ್ಷಕ ಮಂಜುನಾಥ ಮುದಗಲ್ಲ, ಹನುಮಂತ ನಂದೆಣ್ಣವರ, ಬಸವಣ್ಣೆ ನಂದೆಣ್ಣವರ, ದೇವಪ್ಪ ನಂದೆಣ್ಣವರ, ನೇತ್ರಾ ಹೊಸಮನಿ, ಶ್ರೀಕಾಂತ್ ಪೂಜಾರ, ಲಿಂಬಯ್ಯನಮಠ ಸೇರಿದಂತೆ ಪುರಸಭೆ ಕಚೇರಿ ಸಿಬ್ಬಂದಿಗಳು ಹಾಜರಿದ್ದರು.

ರೈತಸೇನಾ ವತಿಯಿಂದ ಕಡಲೆ ಅಭಿವೃದ್ಧಿ ನಿಗಮ ಸ್ಥಾಪನೆಗೆ ಆಗ್ರಹ

# ಕಡಲೆ ಬೆಳೆಗಾರರನ್ನು ಕಡೆಗಣಿಸದಿರಿ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ತೊಗರಿ ಬೆಳೆಗಾರರ ಹಿತಕಾಪಾಡಲು ಅಸ್ತಿತ್ವಕ್ಕೆ ಬಂದಿರುವ ತೊಗರಿ ಅಭಿವೃದ್ಧಿ ಮಂಡಳಿಯಂತೆ ಕಡಲೆ ಬೆಳೆಗಾರರ ಹಿತರಕ್ಷಣೆಗಾಗಿ ಕಡಲೆ ಅಭಿವೃದ್ಧಿ ನಿಗಮ ಸ್ಥಾಪನೆಗೆ ರಾಜ್ಯ ಸರ್ಕಾರ ಮುಂದಾಗಬೇಕು ಎಂದು ಆಗ್ರಹಿಸಿ ರೈತಸೇನಾ ವತಿಯಿಂದ ಸೋಮವಾರ ಪ್ರತಿಭಟನೆ ನಡೆಸಲಾಯಿತು.



ನರೇಗಲ್ಲ ಘಟಕದ ಅಧ್ಯಕ್ಷ ಶರಣಪ್ಪ ಧರ್ಮಾಯತ ಮಾತನಾಡಿ, ರಾಜ್ಯ ಸರ್ಕಾರವು ತೊಗರಿ ಬೆಳೆಗೆ ಪ್ರೋತ್ಸಾಹ ಧನವನ್ನು ಘೋಷಿಸಿದ್ದು ಕಡಲೆ ಬೆಳೆಗಾರರನ್ನು ಕಡೆಗಣಿಸಿ, ಕಡಲೆ ಬೆಳೆಗಾರರಿಗೆ ನೋವುಂಟುಮಾಡಿದೆ. ಉತ್ತರ ಕರ್ನಾಟಕದ ಬಹುತೇಕ ಜಿಲ್ಲೆಗಳಲ್ಲಿ ಸಾಂಪ್ರದಾಯಿಕ ವಾಣಿಜ್ಯ ಬೆಳೆಯಾಗಿ ಕಡಲೆಯನ್ನು ಬೆಳೆಯಲಾಗುತ್ತಿದೆ. ಹವಾಮಾನ ವೈಪರಿತ್ಯದಿಂದಾಗಿ ಕಡಲೆ ಬೆಳೆಗೆ ಸಿಡಿ ರೋಗ, ಕೀಟ ಬಾಧೆ ಸೇರಿದಂತೆ ಇತರೆ ರೋಗಗಳು ಬಂದು ನಿರೀಕ್ಷಿತ ಇಳುವರಿ ಸಿಗುತ್ತಿಲ್ಲ. ಆದ್ದರಿಂದ, ಕಡಲೆ ಬೆಳೆ ಬೆಳೆಯುವ ರೈತರ ಹಿತದೃಷ್ಟಿಯಿಂದ ಗದುಗಿನಲ್ಲಿ ಕಡಲೆ ಬೆಳೆ ಅಭಿವೃದ್ಧಿ ನಿಗಮ ಸ್ಥಾಪನೆಗೆ ರಾಜ್ಯ ಸರ್ಕಾರ ಮುಂದಾಗಬೇಕು.

ರೈತ ಮುಖಂಡ ಚಂದ್ರು ಹೊನವಾಡ ಮಾತನಾಡಿ, ನರೇಗಲ್ಲ ಹೋಬಳಿಯಲ್ಲಿ ನಡೆಸಲು ಉದ್ದೇಶಿಸಿರುವ 220ಕೆವಿ ಜೋಡು ಗೋಪುರ ವಿದ್ಯುತ್ ಸ್ಥಾವರ ಸ್ಥಾಪನೆಯನ್ನು ಕೈಬಿಡಬೇಕು. ಈಗಾಗಲೇ ಹೋಬಳಿಯಲ್ಲಿ ಪವನ, ಸೋಲಾರ್ ವಿದ್ಯುತ್ ಯೋಜನೆಗಾಗಿ ಸಾಕಷ್ಟು ಪ್ರಮಾಣದ ಕೃಷಿ ಜಮೀನು ವಾಣಿಜ್ಯ ಉದ್ದೇಶಕ್ಕೆ ಬಳಕೆಯಾಗಿದೆ. ಈಗ ಮತ್ತೆ ಇಟಗಿಯಿಂದ ಡೋಣಿ ವಿದ್ಯುತ್ ಮಾರ್ಗಕ್ಕಾಗಿ ರೈತರ ಫಲವತ್ತಾದ ಜಮೀನಿಗಳಲ್ಲಿ ವಿದ್ಯುತ್ ಗೋಪುರ ನಿರ್ಮಾಣ ಮಾಡುವುದು ಸೂಕ್ತವಲ್ಲ. ಆದ್ದರಿಂದ, ಈ ಯೋಜನೆಯನ್ನು ಕೈಬಿಡಬೇಕು ಎಂದು ಆಗ್ರಹಿಸಿದರು.

ಮನವಿ ಸ್ವೀಕರಿಸಿ ಮಾತನಾಡಿದ ತಹಸೀಲ್ದಾರ ಕಿರಣಕುಮಾರ ಕುಲಕರ್ಣಿ, ತಮ್ಮ ನ್ಯಾಯುತವಾದ ಬೇಡಿಕೆಗಳನ್ನು ಜಿಲ್ಲಾಧಿಕಾರಿಗಳ ಗಮನಕ್ಕೆ ತರಲಾಗುವುದು ಎಂದರು.

ವಿ.ಎಂ. ಪಾಯಪ್ಪಗೌಡ್ರ, ಎಸ್.ಕೆ. ಧರ್ಮಾಯತ, ಎಂ.ವಿ. ಧರ್ಮಾಯತ, ಶಿವಪುತ್ರಪ್ಪ ಸಂಗನಾಳ, ರಂಗಪ್ಪ ನಾಯ್ಕ, ಮಲ್ಲಿಕಾರ್ಜುನ ಮಳ್ಳಿ, ಸಿದ್ದಪ್ಪ ಇಟ್ಟಣ್ಣವರ, ಶರಣಪ್ಪ ಹಕ್ಕಿ, ಅಶೋಕ ಗೇದಗೇರಿ, ಜಗದೀಶ ಹೊನವಾಡ, ಬಸಪ್ಪ ಜೋಗಿ, ಶಿವನಗೌಡ ಕಡದಳ್ಳಿ, ಚನ್ನಬಸಪ್ಪ ಕುಷ್ಟಗಿ, ಕಳಕಪ್ಪ ಹುಯಿಲಗೋಳ, ವಿ.ಎ. ಕುಂಬಾರ, ಎಸ್.ಬಿ. ಜುಟ್ಲ, ಮಲ್ಲಪ್ಪ ಹಕಾರಿ, ಹನಮಪ್ಪ ಬೇಲೇರಿ, ಬಿ.ವಿ. ಲಕ್ಕನಗೌಡ್ರ, ಅಶೋಕ ಬೇವಿನಕಟ್ಟಿ, ಈರಪ್ಪ ಹತ್ತಿಕಟಗಿ, ಪಿಎಸ್‌ಐ ಐಶ್ವರ್ಯ ನಾಗರಾಳ, ಎಎಸ್‌ಐ ಶೇಖರ ಹೊಸಳ್ಳಿ ಸೇರಿದಂತೆ ಸಿಬ್ಬಂದಿ ಇದ್ದರು.

ತೊಗರಿ ಬೆಳೆಗಾರರಿಗೆ ತೋರುವ ಕಾಳಜಿಯನ್ನು ಕಡಲೆ ಬೆಳೆಗಾರರಿಗೆ ನೀಡದಿರುವುದು ಖಂಡನೀಯ. ಒಂದು ಕಣ್ಣಿಗೆ ಬೆಣ್ಣೆ ಒಂದು ಕಣ್ಣಿಗೆ ಸುಣ್ಣ ಹಚ್ಚುವ ಕೆಲಸವನ್ನು ರಾಜ್ಯ ಸರ್ಕಾರ ಕೈಬಿಡಬೇಕು. ಕೇಂದ್ರ ಸರ್ಕಾರದ ಕನಿಷ್ಠ ಮಾರಾಟ ಬೆಲೆಯೊಂದಿಗೆ ರಾಜ್ಯ ಸರ್ಕಾರದ ರೂ.1500 ಹೆಚ್ಚಿಸುವ ಮೂಲಕ ಕಡಲೆ ಬೆಂಬಲ ಬೆಲೆಯನ್ನು ರೂ. 7150ಕ್ಕೆ ಹೆಚ್ಚಿಸಬೇಕು ಎಂದು ರೈತರು ಆಗ್ರಹಿಸಿದರು.


ಕರ್ನಾಟಕ ಸರ್ಕಾರ

**ಗ್ರಾಮ ಪಂಚಾಯತ ಕಾರ್ಯಲಯ ಬಟ್ಟೂರ**

ತಾಲೂಕ:- ಲಕ್ಷ್ಮೇಶ್ವರ ಜಿಲ್ಲಾ:- ಗದಗ

ಸಂ.ಗ್ರಾ.ಪ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024-25 ದಿನಾಂಕ:-27/01/2025

**ದರಪಟ್ಟಿ ಪ್ರಕಟಣೆ**

ಅಧ್ಯಕ್ಷರು/ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಬಟ್ಟೂರ ಇವರ 2024-25ನೇ ಸಾಲಿನ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಪಾರ್ಮಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ ಸಂ | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ |
|---|---|---|
| 1 | ಬಟ್ಟೂರ ಗ್ರಾಮದ ಶಿರಹಟ್ಟಿ ಮುಖ್ಯ ರಸ್ತೆಯಿಂದ ಲೋಹಾರ ಅವರ ಜಮೀನವರೆಗೆ ರಸ್ತೆ ಅಭಿವೃದ್ದಿ ಪಡಿಸುವುದು. | 135066.00 |
| 2 | ಕುಂದ್ರಳ್ಳಿ ಗ್ರಾಮದ ಉಪ್ಪಾರ ಬಾವಿಂದ ಜವುಳದ ಹಳ್ಳದವರೆಗೆ ಚರಂಡಿ ನಿರ್ಮಾಣ. | 78767.00 |
| 3 | ಬಟ್ಟೂರ ಗ್ರಾಮದ ಕಾಮನಕಟ್ಟಿಯಿಂದ ಮೈಲಾರಲಿಂಗಶ್ವರ ದೇವಸ್ಥಾನದವರೆಗೆ ಸಿ ಸಿ ರಸ್ತೆ ನಿರ್ಮಾಣ. | 72338.00 |
| 4 | ಬಟ್ಟೂರ ಗ್ರಾಮದ ಹಾಲಸ್ವಾಮಿ ದೇವಸ್ಥಾನದ ಹತ್ತಿರ ಸಿ ಡಿ ನಿರ್ಮಾಣ. | 91283.00 |
| 5 | ಬಟ್ಟೂರ ಗ್ರಾಮದ ಹೂಗಾರ ಎನ್ ಯ ಪ್ಲಾಟ ಹತ್ತಿರ ಸಿ ಡಿ ನಿರ್ಮಾಣ. | 119277.00 |
| 6 | ಬಟ್ಟೂರ ಗ್ರಾಮದ ಬಸಪ್ಪ ಸಿದ್ದಪ್ಪ ಸಾವಿರಕುರಿ ಹತ್ತಿರ ಸಿ ಡಿ ನಿರ್ಮಾಣ. | 74279.00 |
| 7 | ಬಟ್ಟೂರ ಗ್ರಾಮದ ಲಕ್ಷ್ಮೇಶ್ವರ ಮೇನ್ ರಸ್ತೆಯಿಂದ ಪ್ರಾಥಮಿಕ ಆರೋಗ್ಯ ಕೇಂದ್ರದವರೆಗೆ ರಸ್ತೆ ಅಭಿವೃದ್ದಿ ಪಡಿಸುವುದು. | 117368.00 |
| 8 | ಬಟ್ಟೂರ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಕಂಪೌಂಡ ನಿರ್ಮಾಣ. | 94954.00 |
| 9 | ಬಟ್ಟೂರ ಗ್ರಾಮದ ನಿಂಗಪ್ಪ ಗದ್ದಿರ ಮನೆಯಿಂದ ಮಲ್ಲಪ್ಪ ಕರಿಗಾರ ಮನೆವರೆಗೆ ಸಿ ಸಿ ರಸ್ತೆ ನಿರ್ಮಾಣ. | 83258.00 |
| 10 | ಬಟ್ಟೂರ ಗ್ರಾಮದ ಬಸಪ್ಪ ತಳವಾರ ಮನೆಯಿಂದ ಮುಖ್ಯ ರಸ್ತೆವರೆಗೆ ಚರಂಡಿ ನಿರ್ಮಾಣ. | 72561.00 |
| 11 | ಕುಂದ್ರಳ್ಳಿ ಗ್ರಾಮದ ಚಂದ್ರಪ್ಪ ಉಪ್ಪಾರ ಇವರ ಹೊಲದ ಹತ್ತಿರ ಕೆರೆ ಹೂಳೆತ್ತುವುದು | 219420.00 |
| 12 | ಕುಂದ್ರಳ್ಳಿ ಗ್ರಾಮದ ಚನ್ನವ್ವ ತಳವಾರ ಮನೆಯಿಂದ ನಾಗರಾಜ ಬಡಿಗೇರ ಹಿತ್ತಲದವರೆಗೆ ಚರಂಡಿ ನಿರ್ಮಾಣ. | 75381.00 |
| 13 | ಕುಂದ್ರಳ್ಳಿ ತಾಂಡಾದ ಹಾಲಶಂಕರ ಹಾ ಮೇಟಿ ಇವರ ಹೊಲದ ಹತ್ತಿರ ಇರುವ ಕಾಲುವೆ ಹೂಳೆತ್ತುವುದು. | 213658.00 |
| 14 | ಕುಂದ್ರಳ್ಳಿ ತಾಂಡಾದ ಉಮ್ಲಪ್ಪ ನೀಲಪ್ಪ ಲಮಾಣಿ ಇವರ ಪ್ಲಾಟ ಹತ್ತಿರ ಸಿ ಡಿ ನಿರ್ಮಾಣ. | 53458.00 |
| 15 | ಕುಂದ್ರಳ್ಳಿ ತಾಂಡಾದ ಬೋಜಪ್ಪ ರೂಪ್ಲಪ್ಪ ಲಮಾಣಿ ಇವರ ಪ್ಲಾಟ ಹತ್ತಿರ ಸಿ ಡಿ ನಿರ್ಮಾಣ. | 54771.00 |
| 16 | ಕುಂದ್ರಳ್ಳಿ ತಾಂಡಾದ ಶೇಖಪ್ಪ ಹಡಪದ ಇವರ ಹೊಲದಿಂದ ಕರೀಮಸಾಬ ಕೊಪ್ಪದರ ಹೊಲದವರೆಗೆ ರಸ್ತೆ ಅಭಿವೃದ್ದಿ ಪಡಿಸುವುದು. | 117250.00 |
| 17 | ಕುಂದ್ರಳ್ಳಿ ತಾಂಡಾದ ವೆಂಕಟೇಶ ಪಾಂಡಪ್ಪ ಲಮಾಣಿಯವರ ಮನೆಯಿಂದ ದಾವಲಪ್ಪ ಲಮಾಣಿಯವರ ಪ್ಲಾಟವರಗೆ ಸಿ ಸಿ ರಸ್ತೆ ನಿರ್ಮಾಣ. | 123165.00 |
| 18 | ಕುಂದ್ರಳ್ಳಿ ಗ್ರಾಮದ ರಮೇಶ ಗೌರಿಯವರ ಹಿತ್ತಲದಿಂದ ಹಾಲಪ್ಪ ನಾದಿಗಟ್ಟಿಯವರ ಹಿತ್ತಲದವರೆಗೆ ಚರಂಡಿ ನಿರ್ಮಾಣ. | 75381.00 |
| 19 | ಕುಂದ್ರಳ್ಳಿ ಗ್ರಾಮದ ಶ್ರೀಕಾಂತಗೌಡ ಪಾಟೀಲ ಮನೆಯಿಂದ ಬಸನಗೌಡ ಪಾಟೀಲ ಹಿತ್ತಲದವರೆಗೆ ಚರಂಡಿ ನಿರ್ಮಾಣ | 75381.00 |

**ಷರಾ:- ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸವುದು ಹಾಗೂ ಪ್ರತಿ ಕಾಮಗಾರಿಯ ಟೆಂಡರ್ ಪಾರಂ ಬೆಲೆ 500.00 ರೂಪಾಯಿಗಳು ನಿಗದಿಪಡಿಸಿದೆ.**

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ: **28/01/2025 ರಿಂದ 01/02/2025** ರವರೆಗೆಖಾಲಿ ದರಪಟ್ಟಿ ಫಾರಂ ನೀಡುವ ದಿನಾಂಕ:-28/01/2025 ,ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ: **01/02/2025 ಮುಂಜಾನೆ 10.00** ಗಂಟೆಯಿಂದ **ಮಧ್ಯಾಹ್ನ 2.30** ಗಂಟೆವರೆಗೆ. ತೆರೆಯುವ ದಿನಾಂಕ ಹಾಗೂ ಸಮಯ:-03/02/2025 ರ ಮಧ್ಯಾಹ್ನ 3.00 ಗಂಟೆನಿಬಂಧನೆಗಳು

1) ಷರತ್ತು/ ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಹಾಗೂ ರಜಾ ದಿನಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತ ಬಟ್ಟೂರುಯಿಂದ ಮಾಹಿತಿ ಪಡೆಯಬಹುದಾಗಿದೆ.

**ಸಹಿ/- ಪಂಚಾಯತಿ ಅಭಿವೃದ್ದಿ ಅಧಿಕಾರಿಗಳು**
**ಗ್ರಾಮ ಪಂಚಾಯತ ಬಟ್ಟೂರ**

**ವಾ.ಸಾ.ಇ/ಗದಗ/562/ದೇಶಪಾಂಡೆಪಬ್ಲಿಸಿಟಿ/2024-25**

**ಸಹಿ/- ಅಧ್ಯಕ್ಷರು**
**ಗ್ರಾಮ ಪಂಚಾಯತ ಬಟ್ಟೂರ**


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka